
# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI — KANNADA DAILY — ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 63 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಸೋಮವಾರ ದಿನಾಂಕ : 14-09-2026 ಪುಟ : 04 ಬೆಲೆ : 2-00


## ತಂತ್ರಜ್ಞಾನ ಶಸ್ತ್ರಾಸ್ತ್ರೀಕರಣ ವಿರುದ್ಧ ಮೋದಿ ಎಚ್ಚರಿಕೆ




ನವದೆಹಲಿ: ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಜಾಗತಿಕವಾಗಿ ಸಾಮಾನ್ಯ ಜೀವನದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಹೇಳಿದ್ದು, ಈ ಸವಾಲುಗಳನ್ನು ಎದುರಿಸಲು ಮತ್ತು ವಿಶೇಷವಾಗಿ ಜಾಗತಿಕ ದಕ್ಷಿಣದಾದ್ಯಂತ ಸಮಗ್ರ ಬೆಳವಣಿಗೆಯನ್ನು ಹೆಚ್ಚಿಸಲು ಬ್ರಿಕ್ಸ್ ಒಂದಾಗಬೇಕು ಎಂದಿದ್ದಾರೆ.

ಬ್ರಿಕ್ಸ್ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ತಂತ್ರಜ್ಞಾನ ಮತ್ತು ನಿರ್ಣಾಯಕ ಖನಿಜಗಳ ಶಸ್ತ್ರಾಸ್ತ್ರೀಕರಣ"ದ ಬಗ್ಗೆ ಗಂಭೀರ ಕಳವಳಗಳನ್ನು ವ್ಯಕ್ತಪಡಿಸಿದರು. ಇದು ಹಂಚಿಕೆಯ ಪ್ರಗತಿ ಮತ್ತು ಸಮೃದ್ಧಿಗೆ ಅಡ್ಡಿಯಾಗಬಹುದು ಎಂದು ಹೇಳಿದರು.

ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್, ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಮತ್ತು ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಸೇರಿದಂತೆ ಬ್ರಿಕ್ಸ್ ಗುಂಪಿನ ಉನ್ನತ ನಾಯಕರ ಸಮ್ಮುಖದಲ್ಲಿ ಮೋದಿ ಈ ಹೇಳಿಕೆಗಳನ್ನು ನೀಡಿದರು.

ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ ಈ ನಾಲ್ಕು ಆಧಾರ ಸ್ತಂಭಗಳತ್ತ ನಾವು ಗಮನವನ್ನು ಕೇಂದ್ರೀಕರಿಸಿದ್ದೇವೆ. ನಿಮ್ಮ ಸಹಕಾರ ಮತ್ತು ಬೆಂಬಲದೊಂದಿಗೆ, ನಮ್ಮ ಹಂಚಿಕೆಯ ದೃಷ್ಟಿಕೋನವನ್ನು ಗೆಲುವು-ಗೆಲುವಿನ ಪರಿಸ್ಥಿತಿಯಾಗಿ ಪರಿವರ್ತಿಸಲು ನಮಗೆ ಸಾಧ್ಯವಾಗಿದೆ ಎಂದರು.

ಪ್ರಪಂಚದಾದ್ಯಂತ ಹೆಚ್ಚುತ್ತಿರುವ

2ನೇ ಪುಟಕ್ಕೆ...

## ಎನ್‌ಡಿಎ ಆಡಳಿತದ 21 ರಾಜ್ಯಗಳಲ್ಲಿ ಏಕರೂಪ ನಾಗರಿಕ ಸಂಹಿತೆ: ಅಮಿತ್ ಶಾ



ಮುಂಬೈ: ಬಿಜೆಪಿ ನೇತೃತ್ವದ ಎನ್‌ಡಿಎ ಆಡಳಿತದಲ್ಲಿರುವ 21 ರಾಜ್ಯಗಳಲ್ಲೂ 2029ರೊಳಗೆ ಏಕರೂಪ ನಾಗರಿಕ ಸಂಹಿತೆ ಜಾರಿಯಾಗಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮುಂಬೈನಲ್ಲಿ ಭಾನುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಮಿತ್ ಶಾ, ಮದುವೆ, ವಿಚ್ಛೇದನ, ಆಸ್ತಿ ಹಕ್ಕು, ಉತ್ತರಾಧಿಕಾರ ಮತ್ತು ದತ್ತು ಸ್ವೀಕಾರ ಸೇರಿದಂತೆ ವೈಯಕ್ತಿಕ ಕಾನೂನುಗಳಿಗೆ ಧರ್ಮಭೇದವಿಲ್ಲದೆ ಒಂದೇ ರೀತಿಯ ಕಾನೂನು ರೂಪಿಸುವ ಉದ್ದೇಶವನ್ನು ಏಕರೂಪ ನಾಗರಿಕ ಸಂಹಿತೆ ಹೊಂದಿದೆ. ಈಗಾಗಲೇ ಹಲವು ರಾಜ್ಯಗಳಲ್ಲಿ ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತರಲಾಗಿದೆ ಎಂದರು.

2ನೇ ಪುಟಕ್ಕೆ...

## ದೆಹಲಿಯಲ್ಲಿ ಮತ್ತೊಂದು ಅವಘಡ: ಭಾರಿ ಬೆಂಕಿ ದುರಂತ



ದೆಹಲಿ : ಸ್ವರೂಪ್ ನಗರ ಪ್ರದೇಶದ ಗೋದಾಮಿನಲ್ಲಿ ಭಾರಿ ಬೆಂಕಿ ಅವಘಡ ಸಂಭವಿಸಿದೆ. ಮಕ್ಕಳು ಮತ್ತು ಮಹಿಳೆಯರು ಸೇರಿ ಆರು ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಘಟನೆಯ ಮಾಹಿತಿ ಪಡೆದ ದೆಹಲಿ ಅಗ್ನಿಶಾಮಕ ದಳದ ತಂಡಗಳು ಸ್ಥಳಕ್ಕೆ ಆಗಮಿಸಿವೆ. ಬೆಂಕಿಯನ್ನು ನಂದಿಸಲು ಹದಿನೈದು ಅಗ್ನಿಶಾಮಕ ದಳದ ವಾಹನಗಳನ್ನು ನಿಯೋಜಿಸಲಾಗಿದೆ.

ಗೋದಾಮಿನ ಬೆಂಕಿಯನ್ನು ನಿಯಂತ್ರಿಸಲು ಅಗ್ನಿಶಾಮಕ ಕಾರ್ಯಾಚರಣೆ ನಡೆಯುತ್ತಿದೆ. ಬೆಂಕಿಗೆ ಕಾರಣ ಪ್ರಸ್ತುತ ತಿಳಿದಿಲ್ಲ. ದೆಹಲಿ ಪೊಲೀಸರ ಪ್ರಕಾರ, ಸ್ವರೂಪ್ ನಗರದ ಲೇನ್ ಸಂಖ್ಯೆ 2 ರಲ್ಲಿರುವ ಕಾರ್ಖಾನೆಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಘಟನೆಯ ಬಗ್ಗೆ ಸ್ವರೂಪ್ ನಗರ ಪೊಲೀಸ್ ಠಾಣೆಯಲ್ಲಿ ವರದಿಯಾಗಿದೆ.

ಪೊಲೀಸರ ಪ್ರಕಾರ, ಖಾಸ್ರಾ ಸಂಖ್ಯೆ 357/58 ರಲ್ಲಿರುವ ಕಟ್ಟಡದ ನೆಲಮಾಳಿಗೆ ಮತ್ತು

3ನೇ ಪುಟಕ್ಕೆ...

## ಪೇದೆ ಹೃದಯಾಘಾತದಿಂದ ಸಾವು



ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರ ಜಿಲ್ಲಾ ಸಶಸ್ತ್ರ ಪೊಲೀಸ್ ಪಡೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪೊಲೀಸ್ ಪೇದೆಯೊಬ್ಬರು ಹಠಾತ್ ಹೃದಯಾಘಾತದಿಂದ ನಿಧನರಾಗಿದ್ದಾರೆ. ಚಿಂತಾಮಣಿ ನಗರದ ವೆಂಕಟಗಿರಿಕೋಟೆ ಕಾಲೋನಿ ನಿವಾಸಿ ಐರಾಜು (40) ಮೃತ ಪೇದೆ. ಐರಾಜು ರಾತ್ರಿ ಕರ್ತವ್ಯ ಮುಗಿಸಿಕೊಂಡು ಚಿಂತಾಮಣಿಯ ತಮ್ಮ ಮನೆಗೆ ವಾಪಸ್ ಆಗಿದ್ದರು. ಇಂದು ಮುಂಜಾನೆ ಸುಮಾರು 5:30ರ ವೇಳೆಗೆ ಹಠಾತ್ ಹೃದಯಾಘಾತ ಸಂಭವಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಮೃತ ಐರಾಜು ಅವರು ಪತ್ನಿ ಹಾಗೂ ಮೂವರು ಗಂಡು ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ಖಾಸಗಿ ಶಾಲಾ ಶಿಕ್ಷಕರಿಗೂ ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿ: ಸರ್ಕಾರ ಚಿಂತನೆ



ಬೆಂಗಳೂರು: ಅರ್ಹ ಖಾಸಗಿ ಶಾಲಾ ಶಿಕ್ಷಕರನ್ನೂ ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿಗೆ ಪರಿಗಣಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ಸಚಿವ ಮಧು ಬಂಗಾರಪ್ಪ ಅವರು ಶನಿವಾರ ಹೇಳಿದ್ದಾರೆ.

ಅತ್ತಿಬೆಲೆಯ ಸಂತ ಫಿಲೋಮಿನಾ ಸಂಸ್ಥೆಯಲ್ಲಿ ಆನೇಕಲ್ ತಾಲೂಕು ಖಾಸಗಿ ಶಾಲೆಗಳ ಒಕ್ಕೂಟ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ, 6ನೇ ವಾರ್ಷಿಕೋತ್ಸವ ಹಾಗೂ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಖಾಸಗಿ ಶಾಲೆಗಳ ಶಿಕ್ಷಕರನ್ನು ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿಗೆ ಪರಿಗಣಿಸುವ ಬೇಡಿಕೆ ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿದೆ. ಈ ಕುರಿತು ಮತ್ತಷ್ಟು ಚರ್ಚೆ ನಡೆಸಿದ ಬಳಿಕ ನಿರ್ಧಾರ

2ನೇ ಪುಟಕ್ಕೆ...

## ಟಿ ನರಸೀಪುರ ಇನ್ಸ್‌ಪೆಕ್ಟರ್ ಅಮಾನತಿಗೆ ಆಗ್ರಹಿಸಿ ಠಾಣೆಯ ಮುಂದೆ ಬಿಜೆಪಿ ಪ್ರತಿಭಟನೆ



ಬೆಂಗಳೂರು: ರಾಜ್ಯದಲ್ಲಿ ಗಣೇಶನ ಭಕ್ತರ ತಂಟೆಗೆ ಬರುವ ಪೊಲೀಸರ ಗ್ರಹಚಾರವನ್ನು ನಾವು ಬಿಡಿಸುತ್ತೇವೆ. ಸದಾ ಹಿಂದೂ ಎಂದು ನಾಟಕವಾಡುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಈಗ ಭಕ್ತರಿಗೆ ಬೆದರಿಕೆ ಹಾಕಿದ ಪೊಲೀಸ್ ಅಧಿಕಾರಿಯ ವಿರುದ್ಧ ಕ್ರಮ ವಹಿಸಲಿ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಗ್ರಹಿಸಿದರು.

ಟಿ. ನರಸೀಪುರ ಪೊಲೀಸ್ ಠಾಣೆ-ಯ ಮುಂದೆ ಇನ್ಸ್‌ಪೆಕ್ಟರ್ ಧನಂಜಯ ಅಮಾನತಿಗೆ ಆಗ್ರಹಿಸಿ ಮಾತನಾಡಿದ ಅವರು, ಮುಸ್ಲಿಮರ ಮಸೀದಿ ಮುಂದೆ ಹೋಗಬಾರದು, ಗ್ರಹಚಾರ ಬಿಡಿಸುತ್ತೇನೆ ಎಂದು ಆತ ಹೇಳಿದ್ದಾನೆ. ಗಣೇಶೋತ್ಸವ ಆಚರಣೆ ಮಾಡುವವರು ರೌಡಿಗಳಲ್ಲ. ಇವರಿಗೆ ಧಮ್ ಇದ್ದರೆ ಮಸೀದಿಯಿಂದ ಕಲ್ಲು ಹೊಡೆಯುವವರಿಗೆ, ಬಾಂಬ್ ಹಾಕುವವರಿಗೆ ಬೆದರಿಕೆ ಹಾಕಬೇಕಿತ್ತು. ಇಂತಹ ದುರಹಂಕಾರಿ ಪೊಲೀಸ್ ಅಧಿಕಾರಿಯನ್ನು ಇಟ್ಟುಕೊಂಡು ಇಲಾಖೆಗೆ ನಾಚಿಕೆಯಾಗಬೇಕು ಎಂದು ಆಕ್ರೋಶ ಹೊರಹಾಕಿದರು.

ನೆಮ್ಮದಿಯಿಂದ ಗಣೇಶೋತ್ಸವ ಆಚರಿಸಲು ಕೂಡ ಕಾಂಗ್ರೆಸ್ ಸರ್ಕಾರ ಅವಕಾಶ ನೀಡುತ್ತಿಲ್ಲ. ಬಾಲ ಗಂಗಾಧರ ತಿಲಕ್ ಅವರು ಸ್ವಾತಂತ್ರ್ಯ ಹೋರಾಟದ ಭಾಗವಾಗಿ ಈ ಆಚರಣೆಯನ್ನು ತಂದರು. ಕೇವಲ ಕರ್ನಾಟಕ ಮಾತ್ರವಲ್ಲದೆ, ಜಗತ್ತಿನಾದ್ಯಂತ ಗಣೇಶೋತ್ಸವ ಆಚರಣೆ ನಡೆಯುತ್ತಿದೆ. ಆದರೆ ಮೈಸೂರಿನ ಟಿ. ನರಸೀಪುರದಲ್ಲಿ ಒಬ್ಬ ಅಹಂಕಾರಿ ಪೊಲೀಸ್ ಅಧಿಕಾರಿ ಹಿಂದೂ ವಿರೋಧಿ ಹೇಳಿಕೆ ನೀಡಿದ್ದಾನೆ ಎಂದು ಆರೋಪಿಸಿದರು.

2ನೇ ಪುಟಕ್ಕೆ...

## ಬಾಲಕ ಕೆರೆಯಲ್ಲಿ ಮುಳುಗಿ ಸಾವು



ಶಿವಮೊಗ್ಗ: ಈಜಲು ಹೋಗಿದ್ದ ಬಾಲಕ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಶಿವಮೊಗ್ಗ ನಗರ ಹೊರವಲಯದ ಸೋಮಿನಕೊಪ್ಪದಲ್ಲಿ ನಡೆದಿದೆ.

ಸೋಮಿನಕೊಪ್ಪದ ನಿವಾಸಿ ಮೊಹಮ್ಮದ್ ಬುರ್ಹಾನ್ (16) ಮೃತ ಬಾಲಕ. ಸೋಮಿನಕೊಪ್ಪದ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಓದುತ್ತಿದ್ದ ಮೊಹಮ್ಮದ್ ಬುರ್ಹಾನ್ ಭಾನುವಾರವಾದ್ದರಿಂದ ಇಂದು ಸೋಮಿನಕೊಪ್ಪ ಕೆರೆಗೆ ಈಜಲು ತೆರಳಿದ್ದ. ಈ ವೇಳೆ ಕೆರೆಯಲ್ಲಿ

3ನೇ ಪುಟಕ್ಕೆ...

## ನಕಲಿ ಔಷಧ ಮಾಫಿಯಾ ವಿರುದ್ಧ ಕಠಿಣ ಕ್ರಮ: ಯು.ಟಿ. ಖಾದರ್



ಗದಗ: ನಕಲಿ ಔಷಧಗಳ ಮಾಫಿಯಾ ದೊಡ್ಡ ಮಟ್ಟದಲ್ಲಿ ವ್ಯಾಪಿಸಿರುವ ಆತಂಕಕಾರಿ ಜಾಲವಾಗಿದ್ದು, ಇದನ್ನು ಸಂಪೂರ್ಣವಾಗಿ ಮಟ್ಟಹಾಕಲು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಜಂಟಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಯು.ಟಿ. ಖಾದರ್ ಹೇಳಿದರು.

ಗದಗ ಹೊರವಲಯದ ಜಿಮ್ಸ್ ಆಸ್ಪತ್ರೆ ಕಾರ್ಯಕ್ರಮ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಕಲಿ ಔಷಧಗಳ ದಂಧೆ ಜನರ ಆರೋಗ್ಯದೊಂದಿಗೆ ನೇರವಾಗಿ ಸಂಬಂಧಿಸಿದ ಅತ್ಯಂತ ಗಂಭೀರ ವಿಚಾರವಾಗಿದೆ. ಇಂತಹ ಔಷಧಗಳಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಸಾಧ್ಯತೆ ಇರುವುದರಿಂದ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದರು.

ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ದೊಡ್ಡ ಪ್ರಮಾಣದ ನಕಲಿ ಔಷಧಗಳ ಜಾಲವನ್ನು ಪತ್ತೆಹಚ್ಚಲಾಗಿದ್ದು, ಪ್ರಕರಣದ ತನಿಖೆಯನ್ನು ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ವಹಿಸಲಾಗಿದೆ. ತನಿಖೆ ಮುಂದುವರಿದಿದ್ದು, ಪ್ರಕರಣದ ಹಿಂದೆ ದೊಡ್ಡ ಮಟ್ಟದ ಜಾಲವಿರುವುದು ಗಮನಕ್ಕೆ ಬಂದಿದೆ ಎಂದು ತಿಳಿಸಿದರು.

ಈ ಪ್ರಕರಣ ಕೇವಲ ಕರ್ನಾಟಕ ಅಥವಾ ರಾಮನಗರಕ್ಕೆ ಸೀಮಿತವಾಗಿಲ್ಲ. ಬೇರೆ ರಾಜ್ಯಗಳಿಂದ ಔಷಧಗಳನ್ನು ತರಿಸುವುದು, ಅಂತರರಾಷ್ಟ್ರೀಯ ಮಟ್ಟದಲ್ಲಿ ಕಂಪನಿಗಳ

2ನೇ ಪುಟಕ್ಕೆ...

## ಬ್ಯಾಂಕ್ ಸಿಬ್ಬಂದಿ ಕಣ್ಣಿಗೆ ಖಾರದ ಪುಡಿ ಎರಚಿ 4.53 ಲಕ್ಷ ದರೋಡೆ:




ನಾಗ್ಪುರ: ಮಹಾರಾಷ್ಟ್ರದ ನಾಗ್ಪುರದಲ್ಲಿ ಸಿನಿಮಾ ಶೈಲಿಯ ಬ್ಯಾಂಕ್ ದರೋಡೆ ಯತ್ನವೊಂದು ನಡೆದಿದ್ದು, ಬ್ಯಾಂಕ್ ಸಿಬ್ಬಂದಿ ಕಣ್ಣಿಗೆ ಅಚ್ಚಖಾರ ಪುಡಿ ಎರಚಿ 4.53 ಲಕ್ಷ

3ನೇ ಪುಟಕ್ಕೆ...

## ‘ಫ್ಯಾಸಿಸಂ’ಗಿಂತ ಪ್ರಜಾಪ್ರಭುತ್ವ ಲೇಸು: ಬಂಡಾಯ ಸಾಹಿತ್ಯ ಶಿಬಿರದಲ್ಲಿ ಪ್ರೊ.ಕಿರಣ್




ಹರಿಹರ: ‘ತೀವ್ರ ರಾಷ್ಟ್ರೀಯತೆ ಯನ್ನು ಪ್ರತಿಪಾದಿಸುತ್ತಲೇ ರಾಷ್ಟ್ರವನ್ನು ಒಬ್ಬನೇ ನಾಯಕನ ನಿಯಂತ್ರಣ ಮತ್ತು ಅಧಿಕಾರಕ್ಕೆ ಒಪ್ಪಿಸುವ ಫ್ಯಾಸಿಸಂ ಪ್ರಜಾಪ್ರಭುತ್ವವನ್ನು ನಾಶ ಮಾಡುತ್ತದೆ. ರಾಷ್ಟ್ರ ಮುಖ್ಯ ಎನ್ನುವ ಫ್ಯಾಸಿಸಂಗಿಂತ, ಜನ ಮುಖ್ಯ ಎನ್ನುವ ಪ್ರಜಾಪ್ರಭುತ್ವ ಲೇಸು’ ಎಂದು ಪ್ರೊ.ಕಿರಣ್ ಎಂ. ಗಾಜನೂರು ಹೇಳಿದರು.

4ನೇ ಪುಟಕ್ಕೆ...

## ನೂತನ ಐಜಿಪಿ ಎನ್.ಸತೀಶ್ ಕುಮಾರ್ ಅಧಿಕಾರ ಸ್ವೀಕಾರ



ದಾವಣಗೆರೆ: ಪೂರ್ವ ವಲಯದ ನೂತನ ಪೊಲೀಸ್ ಮಹಾನಿರ್ದೇಶಕರಾಗಿ (ಐಜಿಪಿ) ಹಿರಿಯ ಐಪಿಎಸ್ ಅಧಿಕಾರಿ ಎನ್. ಸತೀಶ್ ಕುಮಾರ್ ಶನಿವಾರ ಅಧಿಕಾರ ಸ್ವೀಕರಿಸಿದರು. ಪ್ರಭಾರ ಐಜಿಪಿಯೂ ಆಗಿರುವ ಎಸ್‌ಪಿ ಎಚ್.ಟಿ.ಶೇಖರ್ ಅವರು ಅಧಿಕಾರ ಹಸ್ತಾಂತರಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸತೀಶ್ ಕುಮಾರ್, ‘ಗಣೇಶೋತ್ಸವ ಸೇರಿದಂತೆ ವಿವಿಧ ಹಬ್ಬಗಳ ಸಂದರ್ಭದಲ್ಲಿ ಪೂರ್ವ ವಲಯ ವ್ಯಾಪ್ತಿಯ ಜಿಲ್ಲೆಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುವುದು. ಡಿ.ಜೆ ಬಳಕೆ ಮತ್ತು ಶಬ್ದ ಮಾಲಿನ್ಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು’ ಎಂದರು.

ಶಿವಮೊಗ್ಗ ಜಿಲ್ಲೆ ಹೆಚ್ಚು ಸೂಕ್ಷ್ಮ ಪ್ರದೇಶವಾಗಿದ್ದು, ಉಳಿದ ಜಿಲ್ಲೆಗಳ ಸೂಕ್ಷ್ಮ ಪ್ರದೇಶಗಳಲ್ಲೂ ಹೆಚ್ಚುವರಿ ನಿಗಾ ವಹಿಸಿ, ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ಸಿಗದಂತೆ ಬಿಗಿ ಬಂದೋಬಸ್ತ್ ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ಬಲಪಡಿಸಲಾಗುವುದು ಎಂದು ಭರವಸೆ ನೀಡಿದರು.

4ನೇ ಪುಟಕ್ಕೆ...

ಒಂದನೇ ಪುಟದಿಂದ..

## ತಂತ್ರಜ್ಞಾನ ಶಸ್ತ್ರಾಸ್ತ್ರೀಕರಣ ವಿರುದ್ಧ ಪ್ರಧಾನಿ ಮೋದಿ ಎಚ್ಚರಿಕೆ

ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತು ಅವು ಸಾಮಾನ್ಯ ಜನರ ಜೀವನದ ಮೇಲೆ ಬೀರುವ ಪ್ರಭಾವದ ಬಗ್ಗೆಯೂ ಮೋದಿ ಮಾತನಾಡಿದರು. ಜಗತ್ತು ಹೆಚ್ಚುತ್ತಿರುವ ಉದ್ವಿಗ್ನತೆಗಳನ್ನು ಕಾಣುತ್ತಿದೆ ಮತ್ತು ಅವು ಸಾಮಾನ್ಯ ಜನರ ಜೀವನದ ಮೇಲೆ ಗಮನಾರ್ಹ ನಕಾರಾತ್ಮಕ ಪರಿಣಾಮ ಬೀರುತ್ತಿವೆ ಎಂದರು.

ಸಾಂಕ್ರಾಮಿಕ ರೋಗಗಳು, ಹವಾಮಾನ ವಿಪತ್ತುಗಳು ಮತ್ತು ಪೂರೈಕೆ ಸರಪಳಿ ಅಡಚಣೆಗಳು ಇಂದಿನ ಅಂತರ್ ಸಂಪರ್ಕಿತ ಜಗತ್ತಿನಲ್ಲಿ, ಯಾವುದೇ ಬಿಕ್ಕಟ್ಟು ಒಂದೇ ಪ್ರದೇಶಕ್ಕೆ ಸೀಮಿತವಾಗಿಲ್ಲ ಎಂಬುದನ್ನು ತೋರಿಸಿವೆ. ಆದ್ದರಿಂದ, ಬ್ರಿಕ್ಸ್ ಗುಂಪಿನೊಳಗೆ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುವತ್ತ ನಾವು ವಿಶೇಷ ಒತ್ತು ನೀಡಿದ್ದೇವೆ. ಸವಾಲುಗಳನ್ನು ಸಕಾಲಿಕವಾಗಿ ಗುರುತಿಸುವುದು, ಅವುಗಳಿಗೆ ಸಿದ್ಧರಾಗಿರುವುದು ಮತ್ತು ತಕ್ಷಣದ ಕ್ರಮ ತೆಗೆದುಕೊಳ್ಳುವುದು ಅಷ್ಟೇ ಅವಶ್ಯಕ" ಎಂದು ಅವರು ಹೇಳಿದರು.

ಬ್ರಿಕ್ಸ್ ಲಾಜಿಸ್ಟಿಕ್ ಪೂರೈಕೆ ಸರಪಳಿ ಸಹಕಾರ ಚೌಕಟ್ಟು ನಮ್ಮ ಪೂರೈಕೆ ಸರಪಳಿಗಳನ್ನು ಹೆಚ್ಚು ವಿಶ್ವಾಸಾರ್ಹ ಮತ್ತು ಸ್ಥಿತಿಸ್ಥಾಪಕವಾಗಿಸಲು ಸಹಾಯ ಮಾಡುತ್ತದೆ. ನಾವೀನ್ಯತೆಯ ಚೌಕಟ್ಟಿನಡಿಯಲ್ಲಿ, ಬ್ರಿಕ್ಸ್ ಇನ್ಕ್ಯುಬೇಟರ್ ನೆಟ್‌ವರ್ಕ್ ನಮ್ಮ ಸ್ಟಾರ್ಟ್‌ಅಪ್‌ಗಳು ಮತ್ತು ಇನ್ಕ್ಯುಬೇಟರ್‌ಗಳನ್ನು ಸಂಪರ್ಕಿಸುತ್ತದೆ. ಜಾಗತಿಕ ದಕ್ಷಿಣ ಎದುರಿಸುತ್ತಿರುವ ಸವಾಲುಗಳನ್ನು ಎದುರಿಸಲು ಬ್ರಿಕ್ಸ್ ಒಟ್ಟಾಗಿ ಕೆಲಸ ಮಾಡಬೇಕು. ಬ್ರಿಕ್ಸ್‌ನಲ್ಲಿ ಜಾಗತಿಕ ದಕ್ಷಿಣದ ವಿಶ್ವಾಸ ಹೆಚ್ಚಾಗಿದೆ ಎಂದು ಅವರು ಹೇಳಿದರು.

## ಎನ್‌ಡಿಎ ಆಡಳಿತದ 21 ರಾಜ್ಯಗಳಲ್ಲಿ ಏಕರೂಪ ನಾಗರಿಕ ಸಂಹಿತೆ: ಅಮಿತ್ ಶಾ

ಸರ್ಕಾರದ ಭದ್ರತಾ ನೀತಿಯನ್ನೂ ಅಮಿತ್ ಶಾ ಇದೇ ವೇಳೆ ಪ್ರಸ್ತಾಪಿಸಿದರು. ಸರ್ಜಿಕಲ್ ಸ್ಟ್ರೈಕ್, ಏರ್‌ಸ್ಟ್ರೈಕ್ ಮತ್ತು ಆಪರೇಷನ್ ಸಿಂಧೂರ ಮೂಲಕ ಭಯೋತ್ಪಾದನೆ ವಿರುದ್ಧ 'ಶೂನ್ಯ ಸಹಿಷ್ಣುತೆ' ನೀತಿಯನ್ನು ದೇಶ ತೋರಿಸಿದೆ ಎಂದು ಹೇಳಿದರು. 2014ಕ್ಕೂ ಮುನ್ನ ಭಾರತದಲ್ಲಿ ಭ್ರಷ್ಟಾಚಾರ, ಜಾತೀಯತೆ ಮತ್ತು ಕುಟುಂಬ ರಾಜ–ಕಾರಣ ಪ್ರಮುಖವಾಗಿದ್ದವು ಎಂದು ಆರೋಪಿಸಿದ ಶಾ, ಬಿಜೆಪಿ ನೇತೃತ್ವದ ಸರ್ಕಾರದ ಅವಧಿಯಲ್ಲಿ 'ಕಾರ್ಯಕ್ಷಮತೆ ಆಧಾರಿತ ರಾಜಕಾರಣ'ಕ್ಕೆ ಆದ್ಯತೆ ನೀಡಲಾಗಿದೆ ಎಂದು ನುಡಿದರು. ಭಾರತದ ವಿದೇಶಾಂಗ ಮತ್ತು ರಕ್ಷಣಾ ನೀತಿಗಳಿಗೆ ಈಗ ಬಲವಾದ ಬೆನ್ನೆಲುಬು ಸಿಕ್ಕಿದೆ. 'ಭಾರತ ಫಸ್ಟ್' ಎಂಬ ನೀತಿಯೇ ಸರ್ಕಾರದ ಕಾರ್ಯವೈಖರಿಗೆ ಮಾರ್ಗದರ್ಶಿಯಾಗಿದೆ. ದೇಶದ ಹಿತಾಸಕ್ತಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಒಂದು ಕಾಲದಲ್ಲಿ 'ಫ್ರಾಜೈಲ್ ಫೈವ್' ಆರ್ಥಿಕತೆಗಳಲ್ಲಿ ಒಂದಾಗಿದ್ದ ಭಾರತ ಇದೀಗ ವಿಶ್ವದ ಅಗ್ರ ಐದು ಆರ್ಥಿಕತೆಗಳಲ್ಲಿ ಸ್ಥಾನ ಪಡೆದಿದೆ ಎಂದು ಹೇಳಿದರು. ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಶೇ.7.8ರಷ್ಟು ಜಿಡಿಪಿ ಬೆಳವಣಿಗೆ ದಾಖಲಾಗಿದ್ದು, ಪ್ರಮುಖ ಆರ್ಥಿಕತೆಗಳಲ್ಲಿ ಭಾರತ ಮುಂಚೂಣಿಯಲ್ಲಿದೆ ಎಂದರು.

ಈ ವೇಳೆ ಆರ್ಟಿಕಲ್ 370, ನಕ್ಸಲಿಸಂ ಮತ್ತು ಈಶಾನ್ಯ ರಾಜ್ಯಗಳ ಪರಿಸ್ಥಿತಿಯನ್ನೂ ಅಮಿತ್ ಶಾ ಪ್ರಸ್ತಾಪಿಸಿದರು. ಹಲವು ದಶಕಗಳಿಂದ ದೇಶದ ಆಂತರಿಕ ಭದ್ರತೆಗೆ ಸವಾಲಾಗಿದ್ದ ಸಮಸ್ಯೆಗಳನ್ನು ಸರ್ಕಾರ ಎದುರಿಸಿದೆ ಎಂದು ಹೇಳಿದರು.

ಮಣಿಪುರ ವಿಧಾನಸಭೆ ಚುನಾವಣೆಗೂ ಮುನ್ನ 1951ರ ಆಧಾರದಲ್ಲಿ ರಾಷ್ಟ್ರೀಯ ನಾಗರಿಕರ ನೋಂದಣಿ ಜಾರಿಯಾಗಲಿದೆಯೇ ಎಂಬ ಪ್ರಶ್ನೆಗೆ ಶಾ ಉತ್ತರಿಸಿದರು. ಮಣಿಪುರದಲ್ಲಿರುವ ಸಹೋದ್ಯೋಗಿಗಳು ಮತ್ತು ವಿವಿಧ ರಾಜಕೀಯ ಪಕ್ಷಗಳೊಂದಿಗೆ ಈ ಕುರಿತು ಚರ್ಚೆ ನಡೆಯುತ್ತಿದೆ. ಯಾವುದೇ ನಿರ್ಧಾರ ಕೈಗೊಂಡ ಕೂಡಲೇ ಅದರ ಬಗ್ಗೆ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು. ಅಕ್ರಮ ವಲಸಿಗರ ವಿಚಾರದಲ್ಲೂ ಸರ್ಕಾರದ ನಿಲುವನ್ನು ಪುನರುಚ್ಚರಿಸಿದ ಅವರು, ದೇಶದಲ್ಲಿರುವ ಅಕ್ರಮ ವಲಸಿಗರನ್ನು ಗುರುತಿಸಿ ಹೊರಹಾಕಲಾಗುವುದು. ಆದರೆ ಅದಕ್ಕಾಗಿ ಪರಿಗಣಿಸಲಾಗುತ್ತಿರುವ ವಿಧಾನಗಳ ವಿವರಗಳನ್ನು ಬಹಿರಂಗಪಡಿಸಲಾಗುವುದಿಲ್ಲ ಎಂದು ಹೇಳಿದರು. ಸರ್ಕಾರದ ವಿರುದ್ಧ ನಡೆಯುತ್ತಿರುವ 'ಕಾಕ್ರೋಚ್ ಜನತಾ ಪಾರ್ಟಿ' ಸೇರಿದಂತೆ ವಿವಿಧ ಪ್ರತಿಭಟನೆಗಳ ಕುರಿತು ಕೇಳಿದ ಪ್ರಶ್ನೆಗೆ, ಭಾರತ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು ಪ್ರತಿಭಟಿಸುವ ಹಕ್ಕನ್ನು ಗೌರವಿಸಲಾಗುತ್ತದೆ. 'ತುರ್ತು ಪರಿಸ್ಥಿತಿ' ಹೇರಲು ಸಾಧ್ಯವಿಲ್ಲ. ಅದು ಕಾಂಗ್ರೆಸ್‌ನ ಮನಸ್ಥಿತಿ ಎಂದು ಟೀಕಿಸಿದರು.

ಸೆಪ್ಟೆಂಬರ್ 17ರಿಂದ 'ಸೇವಾ ಸಂಕಲ್ಪ ಅಭಿಯಾನ':

ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಜೀವನವನ್ನು ಗುರುತಿಸಲು ಸೆಪ್ಟೆಂಬರ್ 17ರಿಂದ ಅಕ್ಟೋಬರ್ 17ರವರೆಗೆ ದೇಶಾದ್ಯಂತ ಒಂದು ತಿಂಗಳ 'ಸೇವಾ ಸಂಕಲ್ಪ ಅಭಿಯಾನ' ನಡೆಸಲಾಗುವುದು. ಸೆಪ್ಟೆಂಬರ್ 17ರಂದು ಪ್ರಧಾನಿ ಮೋದಿಯವರ ಜನ್ಮದಿನದಂದು ಅಭಿಯಾನ ಆರಂಭವಾಗಲಿದೆ. ಬಿಜೆಪಿ, ಎನ್‌ಡಿಎ ಮಿತ್ರಪಕ್ಷಗಳು, ಸ್ವಯಂಸೇವಾ ಸಂಘಟನೆಗಳು ಮತ್ತು ದೇಶದ ಜನರು ಇದರಲ್ಲಿ ಭಾಗವಹಿಸಲಿದ್ದಾರೆ. ಈ ಅಭಿಯಾನವನ್ನು ಪ್ರತಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶ, ಜಿಲ್ಲೆ, ಲೋಕಸಭೆ ಹಾಗೂ ವಿಧಾನಸಭಾ ಕ್ಷೇತ್ರಗಳಿಂದ ಹಿಡಿದು ಮತಗಟ್ಟೆ ಮಟ್ಟದವರೆಗೂ ಕೊಂಡೊಯ್ಯಲಾಗುವುದು ಎಂದು ತಿಳಿಸಿದರು. ಪ್ರಧಾನಿ ಮೋದಿಯವರ 25 ವರ್ಷಗಳ ಸಾರ್ವಜನಿಕ ಜೀವನದ ಪಯಣ, ಸಾಧನೆಗಳು ಮತ್ತು 2047ರ ವೇಳೆಗೆ 'ವಿಕಸಿತ ಭಾರತ' ನಿರ್ಮಿಸುವ ಅವರ ದೃಷ್ಟಿಕೋನವನ್ನು ಅಭಿಯಾನದಲ್ಲಿ ಜನರಿಗೆ ತಲುಪಿಸಲಾಗುವುದು. 2014ರಲ್ಲಿ ಪ್ರಧಾನಿಯಾದ ನಂತರ ಹಲವು ವರ್ಷಗಳಿಂದ ಬಾಕಿ ಉಳಿದಿದ್ದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಮೋದಿ ಅವರು 'ಪ್ರಧಾನ ಸೇವಕ'ನಾಗಿ ಕೆಲಸ ಮಾಡಿದ್ದಾರೆ. ಗುಜರಾತ್ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸುವುದರಿಂದ ಪ್ರಧಾನಿಯಾಗುವವರೆಗೆ ಸತತ 25 ವರ್ಷಗಳ ಕಾಲ ಸರ್ಕಾರದ ಮುಖ್ಯಸ್ಥರಾಗಿರುವ ನಾಯಕರು ಬಹಳ ವಿರಳ ಎಂದು ಶ್ಲಾಘಿಸಿದರು. ಅಭಿಯಾನದಲ್ಲಿ 12 ವಿಭಾಗಗಳ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಮತಗಟ್ಟೆ, ತಾಲೂಕು ಮತ್ತು ಜಿಲ್ಲಾಮಟ್ಟದಲ್ಲೂ ಹಲವು ಕಾರ್ಯಕ್ರಮಗಳು ನಡೆಯಲಿವೆ. 'ಅನ್‌ಟೋಲ್ಡ್ ಸ್ಟೋರೀಸ್ ಆಫ್ ನಮೋ ಸೇವಾ' ಹೆಸರಿನಲ್ಲಿ ಸ್ಥಳೀಯ ಭಾಷೆಗಳಲ್ಲಿ ಸಂಗೀತ ಮತ್ತು ನಾಟಕ ಪ್ರದರ್ಶನಗಳನ್ನು ಆಯೋಜಿಸಿ ಗ್ರಾಮಗಳಿಗೂ ಕೊಂಡೊಯ್ಯಲಾಗುವುದು ಎಂದು ತಿಳಿಸಿದರು.

## ಖಾಸಗಿ ಶಾಲಾ ಶಿಕ್ಷಕರಿಗೂ ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿ: ಸರ್ಕಾರ ಚಿಂತನೆ

ಕೈಗೊಳ್ಳಲಾಗುವುದು ಎಂದು ಹೇಳಿದರು.

ಖಾಸಗಿ ಶಾಲೆಗಳು ಮುಂದಿಟ್ಟಿರುವ ವಿವಿಧ ಬೇಡಿಕೆಗಳನ್ನೂ ಪರಿಶೀಲಿಸಲಾಗುತ್ತಿದೆ. ಬೆಂಗಳೂರಿನ ಸಂಚಾರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಖಾಸಗಿ ಶಾಲೆಗಳ ಸಮಯ ಬದಲಾವಣೆ ಮಾಡುವಂತೆ ಮನವಿ ಮಾಡಲಾಗಿದೆ. ಈ ವಿಚಾರವನ್ನು ಸಂಬಂಧಪಟ್ಟ ಇಲಾಖೆಗಳೊಂದಿಗೆ ಚರ್ಚಿಸಿ ಬಳಿಕ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಶಿಕ್ಷಕರಿಗೂ ಸರ್ಕಾರಿ ನೌಕರರಿಗೆ ನೀಡಲಾಗುವ ಮನೆ ಬಾಡಿಗೆ ಭತ್ಯೆ ವಿಸ್ತರಿಸುವ ಬೇಡಿಕೆ ಕುರಿತು ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ನೇತೃತ್ವದ ಸಮಿತಿ ಶಿಫಾರಸುಗಳನ್ನು ಮಾಡಿದೆ.

ಖಾಸಗಿ ಶಾಲೆಗಳಿಗೆ ಸರ್ಕಾರಿ ಪಠ್ಯಪುಸ್ತಕಗಳನ್ನು ಒದಗಿಸಬೇಕು ಎಂಬ ಬೇಡಿಕೆಯೂ ಪರಿಶೀಲನೆಯಲ್ಲಿದೆ. ಅಗತ್ಯ ಹಣ ಪಾವತಿಸಲು ಖಾಸಗಿ ಶಾಲೆಗಳು ಸಿದ್ಧವಿದ್ದು, ಈ ಬೇಡಿಕೆ ಕುರಿತು ಸರ್ಕಾರ ಚಿಂತನೆ ನಡೆಸುತ್ತಿದೆ ಎಂದರು.

ಇದೇ ವೇಳೆ ತಮ್ಮ ತಂದೆ ಹಾಗೂ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರ ಅವಧಿಯಲ್ಲಿ ಜಾರಿಗೆ ತಂದಿದ್ದ 'ಅಕ್ಷಯ' ಕಾರ್ಯಕ್ರಮವನ್ನು ಸ್ಮರಿಸಿದ ಅವರು, ಸರ್ಕಾರಿ ಶಾಲೆಗಳನ್ನು ಬಲಪಡಿಸುವುದು ಹಾಗೂ ವಿದ್ಯಾರ್ಥಿಗಳ ಹಾಜರಾತಿ ಹೆಚ್ಚಿಸುವುದು ಇದರ ಉದ್ದೇಶವಾಗಿತ್ತು. ಈ ಯೋಜನೆಯಡಿ ಸರ್ಕಾರಿ ಶಾಲೆಗಳಿಗೆ ನಿಯಮಿತವಾಗಿ ಹಾಜರಾಗುತ್ತಿದ್ದ ಮಕ್ಕಳಿಗೆ ದಿನಕ್ಕೆ ಒಂದು ರೂಪಾಯಿ ಪ್ರೋತ್ಸಾಹಧನ ನೀಡಲಾಗುತ್ತಿತ್ತು ಎಂದು ಹೇಳಿದರು.

ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಂದು ಕೋಟಿಗೂ ಹೆಚ್ಚು ಮಕ್ಕಳು ಬರುತ್ತಿದ್ದು, ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ತರಲು ತಾವು ಕಾರ್ಯನಿರ್ವಹಿಸುತ್ತಿರುವುದಾಗಿ ಹೇಳಿದರು.

ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮಾತನಾಡಿ, ಮಧು ಬಂಗಾರಪ್ಪ ಅವರು ಶಿಕ್ಷಣ ಕ್ಷೇತ್ರದಲ್ಲಿ ಹಲವು ಬದಲಾವಣೆಗಳನ್ನು ತಂದಿದ್ದು, ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಸುಧಾರಣೆ ಕಂಡುಬಂದಿದೆ ಎಂದು ಹೇಳಿದರು.

## ಮನೋ ವಿಕಲಾಂಗರ ನೂತನ ವೈದ್ಯಕೀಯ ಕೇಂದ್ರಕ್ಕೆ ರಾಜ್ಯಪಾಲರಿಂದ ಚಾಲನೆ



ಬೆಂಗಳೂರು: ದಿವ್ಯಾಂಗರೂ ಸಶಕ್ತರಾಗಬೇಕು ಅದಕ್ಕೆ ಪೂರಕವಾಗಿ ಭಾರತ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳು ಸಹಾಯ ಹಸ್ತ ನೀಡಬೇಕಿದೆ,ಇದರಲ್ಲಿ ಭಾರತ ಸರ್ಕಾರ ಒಂದು ಹೆಜ್ಜೆ ಮುಂದೆ ಹೋಗಿ ವಿಶ್ವ ದಾಖಲೆ ಮಾಡಿದೆ. ಈ ನಿಟ್ಟಿನಲ್ಲಿ ಕೊಡುಗೈ ದಾನಿಗಳು ಕೈ ಜೋಡಿಸಬೇಕೆಂದು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದರು.

ಬೆಂಗಳೂರು ಉತ್ತರ ತಾಲ್ಲೂಕು ದಾಸನಪುರ ಹೋಬಳಿಯ ಗೌಡನಹಳ್ಳಿಯಲ್ಲಿ 7 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಮಾತೃಶ್ರೀ ಮನೋ ವಿಕಾಸ ಕೇಂದ್ರದ ನೂತನ ವೈದ್ಯಕೀಯ ಕೇಂದ್ರದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.ವಿಕಲಾಂಗರು ದೇವರ ಮಕ್ಕಳಂತೆ, ಅವರ ಸೇವೆ ಮಾಡುವುದು ಪುಣ್ಯದ ಕೆಲಸ, ಅಂತಹ ಕೆಲಸವನ್ನು ಮಾತೃಶ್ರೀ ಮನೋವಿಕಾಸ ಕೇಂದ್ರ ಮುಂದಾಗಿದೆ,ಅದಕ್ಕೆ ಬೆನ್ನೆಲುಬಾಗಿ ನಿಂತಿರುವ ಮಹಾದಾನಿಗಳಿಗೆ ಭಗವಂತನ ಸೇವೆಯನ್ನು ನೇರವಾಗಿ ಮಾಡುವಂತಹ ಅವಕಾಶ ಸಿಕ್ಕಿದೆ ಎಂದು ಅವರು ಹೇಳಿದರು.

ಮನೋ ವಿಕಲಚೇತನ ಮಕ್ಕಳ ಆರೈ–ಕೆ ಮಾಡಬೇಕಾದರೆ ಸೇವೆ,ಸಂವೇದನೆಯ ಮನೋಭಾವನೆ ಇರಬೇಕು. ಮಾನವ ಸೇವೆಗೆ ಸರ್ವೋಚ್ಚ ಸ್ಥಾನಮಾನವಿದೆ ಎಂದು ಅಭಿಪ್ರಾಯಪಟ್ಟರು.

ಸಂವಿಧಾನದಲ್ಲಿ ಪ್ರತಿ ನಾಗರಿಕನಿಗೂ ಸಮಾನ ಸ್ಥಾನವಿದ್ದು ವಿಕಲಾಂಗರಿಗೆ ಪ್ರತ್ಯೇಕ ಸ್ಥಾನ ಮಾನ ದೊರೆಯುವಂತಾಗಬೇಕು ಎಂದು ಕರೆ ನೀಡಿದ ಥಾವರ್ ಚಂದ್ ಗೆಹ್ಲೋಟ್, ದಾನಿಗಳು ಅವಶ್ಯಕತೆ ಇದೆಯೇ ಅದರಿಂದ ಯಾವುದಾದರೂ ರೀತಿಯಲ್ಲಿ ಸಮಾಜಕ್ಕೆ ಸಹಾಯವಾಗುತ್ತಿದೆಯೇ ಎಂಬುದನ್ನು ಮನಗಂಡು ದಾನ ನೀಡಬೇಕೆಂದು ಕಿವಿ ಮಾತು ಹೇಳಿದರು.

ವಾರ್ತಾ ಇಲಾಖೆ ಆಯುಕ್ತ, ಐಪಿಎಸ್ ಅಧಿಕಾರಿ ಹಾಗೂ ಮಾತೃಶ್ರೀ ಮನೋ ವಿಕಾಸ ಕೇಂದ್ರದ ಮುಖ್ಯಸ್ಥ ಎಂ.ಎನ್ .ಅನುಚೇತ್, ಡೇ ಕೇರ್ ಸೆಂಟರ್ ಆರಂಭಿಸುತ್ತಿದ್ದೇವೆ. ರಾಜ್ಯದ 5 ಕಡೆ ಶಾಖೆಗಳನ್ನು ಅರಂಭಿಸಲು ನಿರ್ಧರಿಸಿದ್ದೇವೆ ಹಾಗೆಯೇ ಇನ್ನೊಂದು ವರ್ಷದಲ್ಲಿ 121 ಇರುವ ಮಕ್ಕಳ ಸಂಖ್ಯೆಯನ್ನು 200 ಮಕ್ಕಳಿಗೆ ವಿಸ್ತರಿಸಲಾಗುವುದು ತಿಳಿಸಿದರು.

ಪದಶ್ರೀ ಪ್ರಶಸ್ತಿ ಪುರಸ್ಕೃತರು, ಸಮಾಜ ಸೇವಕರಾದ ಡಾ.ಎಸ್ ಜಿ ಸುಶೀಲಮ್ಮ, ಪದಶ್ರೀ ಪ್ರಶಸ್ತಿ ಪುರಸ್ಕೃತರು, ಖ್ಯಾತ ವೈದ್ಯರಾದ ಡಾ.ಸುರೇಶ್ ಹನಗವಾಡಿ, ಮಹಾ ಪೋಷಕರಾದ ನಿವೃತ್ತ ಐಪಿಎಸ್ ಅಧಿಕಾರಿ ಗೋಪಾಲ್ ಹೊಸೂರ್, ನಿವೃತ್ತ ಎಸಿಪಿ ಲೋಕೇಶ್ವರ, ಪ್ರಧಾನ ಕಾರ್ಯದರ್ಶಿ ಎಸ್.ಬಸವರಾಜು ಅವರುಗಳು ವೇದಿಕೆಯಲ್ಲಿದ್ದರು.

25 ವರ್ಷಗಳ ಹಿಂದೆ ಮೂವರು ಮನೋ ವಿಕಲಚೇತನ ಮಕ್ಕಳಿಂದ ಆರಂಭವಾದ ಮಾತೃಶ್ರೀ ಮನೋ ವಿಕಾಸ ಕೇಂದ್ರದಲ್ಲೀಗ 121 ಮನೋ ವಿಕಲಚೇತನ ಮಕ್ಕಳಿದ್ದಾರೆ. ವರ್ಷವಿಡೀ ವೈದ್ಯಕೀಯ ಸೇವೆ ಇತ್ತು. ಈಗ ಆಸ್ಪತ್ರೆ ಆರಂಭಿಸಿರುವುದರಿಂದ ಮನೋ ವಿಕಲಾಂಗ ಚೇತನರಿಗೆ ಅನುಕೂಲವಾಗಲಿದೆ.

## ಹರಿಹರ ಗಣೇಶೋತ್ಸವ ಇತಿಹಾಸದಲ್ಲಿ ಪ್ರಪ್ರಥಮ ಬಾರಿಗೆ ಆಕರ್ಷಣೀಯ ಕೇದಾರನಾಥ ಮಾದರಿ ನಿರ್ಮಾಣ ; ನಂದಿಗಾವಿ ಶ್ರೀನಿವಾಸ್



ಹರಿಹರ : ಹರಿಹರ ನಗರದ ಗಣೇಶೋತ್ಸವದ ಇತಿಹಾಸದಲ್ಲಿ ಪ್ರಪ್ರಥಮ ಬಾರಿಗೆ ಆಕರ್ಷಣೀಯ 12 ಜ್ಯೋತಿರ್ಲಿಂಗಗಳಲ್ಲಿ ಒಂದಾದ ಕೇದಾರನಾಥದ ಮಾದರಿ ವಿಶೇಷವಾಗಿ ನಿರ್ಮಾಣ ಮಾಡಲಾಗಿದೆ ಎಂದು ಗಣೇಶೋತ್ಸವ ಸಮಿತಿ ಗೌರವಾಧ್ಯಕ್ಷ, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ತಾಲೂಕ ಅಧ್ಯಕ್ಷ ಎನ್. ಎಚ್. ಶ್ರೀನಿವಾಸ್ ನಂದಿಗಾವಿ ತಿಳಿಸಿದರು.

ನಗರದ ತಾಲೂಕ ಕ್ರೀಡಾಂಗಣ(ಗಾಂಧಿ ಮೈದಾನ)ದ ಆವರಣ ದಲ್ಲಿ ವಿಶೇಷವಾಗಿ ನಿರ್ಮಾಣ ಮಾಡಿರುವ ಸಾರ್ವಜನಿಕ ಗಣೇಶೋತ್ಸವದ ಮಹಾಮಂಟಪದ ಬಳಿ ಭಾನುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು,ಪುರಾಣ ಪ್ರಸಿದ್ಧ 12 ಜ್ಯೋತಿರ್ಲಿಂಗಗಳಲ್ಲಿ ಒಂದಾಗಿರುವ ಮತ್ತು ಪಂಚಪೀಠ ಗಳಲ್ಲಿ ಕೇದಾರ ಪೀಠದ ಆರಾಧ್ಯದೈವ ಕೇದಾರನಾಥದ ಶ್ರೀ ಕೇದಾರೇಶ್ವರ ದೇವಸ್ಥಾನದ ಮಾದರಿಯಲ್ಲಿ ಈ ಬಾರಿ ವಿಶೇಷ ಆಕರ್ಷಣೀಯವಾಗಿ ವಿನಾಯಕ ಮಹೋತ್ಸವವನ್ನು ಆಚರಣೆ ಮಾಡಲಾಗುತ್ತಿದೆ.

ಸೆ.14 ರ ಸೋಮವಾರ ಪ್ರತಿಷ್ಠಾಪಿಸಲಾಗುವ ವಿನಾಯಕ ಮೂರ್ತಿಯು 10 ದಿನಗಳ ಕಾಲ ಶಾಸ್ತ್ರೋಕ್ತವಾಗಿ ಪೂಜಾ ಕೈಂಕರ್ಯಗಳ ಜೊತೆಗೆ ಹರಿಹರ ಕ್ಷೇತ್ರದ ಜನತೆಯೂ ಸೇರಿದಂತೆ ಅಕ್ಕಪಕ್ಕದ ಜಿಲ್ಲೆಯ ಭಕ್ತರು ಸಾರ್ವಜನಿಕರು ಸಹ ಆಕರ್ಷಣೀಯವಾಗಿ ವೀಕ್ಷಿಸಲು ವ್ಯವಸ್ಥೆ ಮಾಡಿದ್ದೇವೆ. ಸಾರ್ವಜನಿಕರ ಪ್ರೋತ್ಸಾಹ ದೊರೆತಲ್ಲಿ ಇನ್ನು ಹೆಚ್ಚು ದಿನಗಳ ಕಾಲ ಮುಂದುವರಿಸಲಾಗುವುದು.

ವಿಶೇಷವಾಗಿ ಜೀ ಕನ್ನಡ ಚಾನೆಲ್ ನಲ್ಲಿ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಸೇರಿದಂತೆ ಇತ್ಯಾದಿ ಶೋಗಳಿಗೆ ಸೆಟ್ ನಿರ್ಮಾಣ ಮಾಡುತ್ತಿರುವ ಚೆನ್ನೈನ ಬಾಲಾಜಿ ಆರ್ಟ್ಸ್ ನ ಬಾಲಾಜಿ ಮತ್ತು ಮಣಿ ತಂಡದವರಿಂದ ಸಿದ್ಧತೆಯ ಕಾರ್ಯದಲ್ಲಿ 25ಕ್ಕೂ ಹೆಚ್ಚು ಕಾರ್ಮಿಕರು ಕಳೆದ 15 ದಿನಗಳಿಂದ ಸ್ಟುಡಿಯೋ ಮಾದರಿಯ ವಿಶೇಷ ಸೆಟ್ಟನ್ನು ನಿರ್ಮಾಣ ಮಾಡುತ್ತಿದ್ದಾರೆ.

ಕೇದಾರನಾಥದಲ್ಲಿರುವಂತೆ ಇಲ್ಲಿಯೂ ಸಹ 56 ಅಡಿ ಎತ್ತರದ ವಿಶೇಷ ಗೋಪುರ ನಿರ್ಮಾಣವಾಗುತ್ತಿದ್ದು ಮಂಟಪದ ಒಳಗೆ ಕೇದಾರೇಶ್ವರನ ಬದಲಿಗೆ ವಿನಾಯಕ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗುತ್ತಿದೆ. ವೀಕ್ಷಣೆಗೆ ಆಗಮಿಸುವ ಭಕ್ತರು ಮತ್ತು ಸಾರ್ವಜನಿಕರಿಗೆ ತಾವು ಕೇದಾರನಾಥದಲ್ಲಿರುವ ವಿಶೇಷ ಅನುಭವ ದೊರೆಯಲಿದೆ ಎಂಬ ಮಾಹಿತಿಯನ್ನು ನೀಡಿದರು.

ಮಹೋತ್ಸವ ಸಮಿತಿಯ ಅಧ್ಯಕ್ಷ ಆರ್. ವಿಜಯಕುಮಾರ್ ಮಾತನಾಡಿ 64ನೇ ವರ್ಷದ ಸಾರ್ವಜನಿಕ ವಿನಾಯಕ ಮಹೋತ್ಸವ ಸಮಿತಿಯ ಅಧ್ಯಕ್ಷನಾಗಿ ಸಾರ್ವಜನಿಕರಲ್ಲಿ ವಿನಂತಿಸುವುದೇನೆಂದರೆ ಕೇದಾರನಾಥಕ್ಕೆ ಹೋಗಿ ದರ್ಶನ ಪಡೆಯಲಾಗದ ಭಕ್ತಾದಿಗಳು ಕೇದಾರನಾಥದ ಮಾದರಿಯ ಇಲ್ಲಿನ ವಿನಾಯಕ ಮಹೋತ್ಸವದಲ್ಲಿ ಭಾಗಿಯಾಗಿ ಅಲ್ಲಿನ ದರ್ಶನದಂತೆ ಇಲ್ಲಿಯೂ ದರ್ಶನ ಭಾಗ್ಯ ಪಡೆಯುವಂತಹ ಅವಕಾಶವಿದೆ.

ಸೆಟ್ ಮತ್ತು ಅಲಂಕಾರಕ್ಕಾಗಿ ಈಗಾಗಲೇ ಸುಮಾರು 15 ಲಕ್ಷಕ್ಕೂ ಹೆಚ್ಚು ಹಣ ಖರ್ಚಾಗಿದ್ದು ಇನ್ನೂ ಹೆಚ್ಚಿನ ಖರ್ಚು ಸಮಿತಿಗೆ ಬರಲಿದ್ದು ಎಲ್ಲವೂ ದೈವಚ್ಛೆಯಂತೆ ನಡೆಯಲಿದೆ. ಮುಖ್ಯವಾಗಿ ಇಷ್ಟೆಲ್ಲಾ ನಡೆಯಲು ಮುಖ್ಯ ಕಾರಣಕರ್ತರಾದ ನಮ್ಮ ಗೌರವಾಧ್ಯಕ್ಷರಾದ ನಂದಿಗಾವಿ ಶ್ರೀನಿವಾಸ್ ರವರಿಗೆ ನಮ್ಮೆಲ್ಲ ಸದಸ್ಯರುಗಳು ಆಭಾರಿಯಾಗಿದ್ದೇವೆ ಎಂದು ಕೃತಜ್ಞತೆ ಅರ್ಪಿಸಿದರು.

ಗೋಷ್ಠಿಯಲ್ಲಿ ಕೆಪಿಸಿಸಿ ಸದಸ್ಯ ಹಾಗೂ ಸಮಿತಿಯ ಗೌರವ ಸಲಹೆಗಾರ ಬಿ ರೇವಣಸಿದ್ದಪ್ಪ ಮಾತನಾಡಿ 64 ವರ್ಷಗಳಿಂದ ಹರಿಹರ ನಗರದಲ್ಲಿ ಸಾರ್ವಜನಿಕ ವಿನಾಯಕ ಮಹೋತ್ಸವ ಸಮಿತಿಯು ಗಣೇಶ ಚೌತಿಯನ್ನು ಆಚರಿಸಿಕೊಂಡು ಬರುತ್ತಿರುವುದು ಒಂದು ದಾಖಲೆ ಸರಿ ಆ ಸಂಸ್ಥೆಯು ಹಲವಾರು ದಶಕಗಳಿಂದ ನಡೆಸಿಕೊಂಡು ಬಂದದ್ದನ್ನು ಇಂದಿನ ಪೀಳಿಗೆ ಮುಂದುವರಿಸಿಕೊಂಡು ಹೋಗುತ್ತಿರುವುದು ಸಂತಸಿಯ ಸಂಗತಿಯಾಗಿದೆ.

ಆಯೋಜಕರು ತಿಳಿಸಿದಂತೆ ಈ ಗಣೇಶೋತ್ಸವದಲ್ಲಿ ಉಚಿತವಾದ ವೇದಿಕೆಯನ್ನು ನಿರ್ಮಾಣ ಮಾಡಲಾಗಿದ್ದು ಸ್ಥಳೀಯ ಹಾಗೂ ಅಕ್ಕಪಕ್ಕದ ಜಿಲ್ಲೆಯ ಕಲಾವಿದರು ತಮ್ಮ ಕಲಾ ಪ್ರದರ್ಶನವನ್ನು ನೀಡಿ, ಹರಿಹರದ ಜನತೆಯನ್ನು ಸಂತೋಷಗೊಳಿಸುವುದರ ಜೊತೆಗೆ ತಮ್ಮ ಕಲಾ ಪ್ರದರ್ಶನವನ್ನು ನೀಡುವ ಅವಕಾಶ ಕಳೆದುಕೊಳ್ಳಬಾರದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಗೌರವ ಸಲಹೆಗಾರರಾದ ಎಂ.ಎಸ್ ಬಾಬುಲಾಲ್, ಖಜಾಂಚಿ ಬಸವರಾಜ್, ಪ್ರಧಾನ ಕಾರ್ಯದರ್ಶಿ ಪ್ರಸನ್ನ ಕೊಂಡಜ್ಜಿ, ಸಂತೋಷ್ ನೋಟದವರ, ಕಿರಣ್, ಬಾಲಾಜಿ ಆರ್ಟ್ಸ್ ನ ಬಾಲಾಜಿ, ಮಣಿ ಸೇರಿದಂತೆ ಹಲವಾರು ಕಾರ್ಯಕರ್ತರು ಈ ಸಮಯದಲ್ಲಿ ಉಪಸ್ಥಿತರಿದ್ದರು

## ಟಿ ನರಸೀಪುರ ಇನ್ಸ್‌ಪೆಕ್ಟರ್ ಅಮಾನತಿಗೆ ಆಗ್ರಹಿಸಿ ಠಾಣೆಯ ಮುಂದೆ ಬಿಜೆಪಿ ಪ್ರತಿಭಟನೆ

1ನೇ ಪುಟದಿಂದ..

ನಾವು ಪಾಕಿಸ್ತಾನದಲ್ಲಿಲ್ಲ. ಗಣೇಶ ಮೊದಲು ಬಂದನೋ, ಮಸೀದಿ ಮೊದಲು ಬಂತೋ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಬೇಕು. ಗಣೇಶನ ಪ್ರತಿಷ್ಠಾಪನೆ ಮಾಡಲು ಗ್ರಾಮ ಪಂಚಾಯಿತಿ, ಪಾಲಿಕೆ, ಜಿಲ್ಲಾಧಿಕಾರಿ ಮೊದಲಾದ ಕಡೆ ಅಲೆಯಬೇಕು. ಮಸೀದಿ ಮುಂದೆ ಹೋದಾಗ ಮಾತ್ರ ಗಲಾಟೆಯಾಗುತ್ತದೆ. ಆದರೆ ಚರ್ಚ್ ಮುಂದೆ ಹೋದಾಗ, ಜೈನರ ಮಂದಿರ, ಸಿಖ್ಖರ ದೇವಾಲಯಗಳ ಮುಂದೆ ಮೆರವಣಿಗೆ ಹೋದಾಗ ಗಲಾಟೆಯಾಗುವುದಿಲ್ಲ ಎಂದು ಹೇಳಿದರು. ಇಷ್ಟು ನಿರ್ದಿಷ್ಟ ರಸ್ತೆಗಳನ್ನು ಮುಸ್ಲಿಮರಿಗೆ ಬರೆದುಕೊಟ್ಟಿದ್ದೇವೆ ಎಂದು ತಿಳಿಸಲಿ. ಇಲ್ಲಿ ಭಾರತದ ಸಂವಿಧಾನ ಇದೆಯೇ ಹೊರತು, ಪಾಕಿಸ್ತಾನದ ಸಂವಿಧಾನವಲ್ಲ. ಮುಸ್ಲಿಮರು ಉರುಸ್ ಮಾಡುವಾಗ ದೇವಾಲಯಗಳ ಮುಂದೆಯೇ ಮೆರವಣಿಗೆ ಹೋಗುತ್ತಾರೆ. ಆದ–ರೆ ಹಿಂದೂಗಳು ಎಂದಿಗೂ ದೇವಾಲಯದಲ್ಲಿ ಕುಳಿತು ಕಲ್ಲು ಹೊಡೆಯುವುದಿಲ್ಲ. ಇಲ್ಲಿ ತಾಲಿಬಾನ್ ಆಡಳಿತ ನಡೆಯುತ್ತಿದೆ ಎಂದರು.

ಒಬ್ಬ ಪೊಲೀಸ್ ಗಣೇಶ ಭಕ್ತರನ್ನು ಕ–ರೆದು ಬೆದರಿಕೆ ಹಾಕುತ್ತಾನೆ ಎಂದರೆ, ಅದ–ಕ್ಕೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಬೆಂಬಲವಿದೆ ಎಂದೇ ಅರ್ಥ. ಹಿಂದೂಗಳು ತಮ್ಮದೇ ದೇಶದಲ್ಲಿ ಸ್ವತಂತ್ರವಾಗಿ ಆಚರಣೆ ಮಾಡಲು ಆಗುತ್ತಿಲ್ಲ. ಸಿಎಂ ಡಿ.ಕೆ. ಶಿವಕುಮಾರ್ ಎಲ್ಲ ಕಡೆ ಓಡಾಡಿ ನಾಮ ಎಳೆದುಕೊಳ್ಳುತ್ತಾರೆ. ಆದರೆ ಹಿಂದೂಗಳಿಗೆ ಬೆಂಬಲ ನೀಡಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಾಂಗ್ಲಾ ನಿವಾಸಿಗಳು, ಬಾಂಬ್ ಹಾಕುವ ಉಗ್ರರನ್ನು ಪೊಲೀಸರು ಸೆರೆಹಿಡಿಯಬೇಕು. ಅದನ್ನು ಬಿಟ್ಟು ಭಕ್ತರಿಗೆ ಧಮಕಿ ಹಾಕಬಾರದು. ಮುಖ್ಯಮಂತ್ರಿಗೆ ಹಿಂದೂ ಧರ್ಮದ ಮೇಲೆ ಗೌರವವಿದ್ದರೆ ಆ ಪೊಲೀಸ್ ಅಧಿಕಾರಿಯನ್ನು ಅಮಾನತು ಮಾಡಲಿ ಎಂದು ಆಗ್ರಹಿಸಿದರು.

ಪೊಲೀಸರು ಭಕ್ತರಿಗೆ ಕಿರುಕುಳ ಕೊಡಲು ಮುಂದಾದರೆ ಅವರ ಗ್ರಹಚಾರವನ್ನು ನಾವು ಬಿಡಿಸುತ್ತೇವೆ. ಇನ್ನು ಮುಂದೆ ರಸ್ತೆಗಳಲ್ಲಿ ಓಡಾಡುವವರಿಗೂ ಬೆದರಿಕೆ ಹಾಕುತ್ತಾರೆ. ಕಾಂಗ್ರೆಸ್‌ನವರು ಬ್ರಿಟಿಷರಿಗಿಂತಲೂ ಕೀಳಾಗಿದ್ದಾರೆ. ಮಸೀದಿಗಳಲ್ಲಿ ಮೈಕ್ ಬಳಸುತ್ತಾರೆ. ಧ್ವನಿವರ್ಧಕಗಳ ಬಳಕೆ ಬಗ್ಗೆ ಕೋರ್ಟ್ ಆದೇಶವಿದೆ. ಅದನ್ನು ಸರ್ಕಾರ ಪಾಲಿಸಬೇಕು ಎಂದು ಹೇಳಿದರು. ಜನರು ಮೊದಲು ಎಚ್ಚರಗೊಳ್ಳಬೇಕು. ಇನ್ನು ಮುಂದೆ ಮನೆಯಲ್ಲಿ ಮಾಡುವ ಗಣೇಶೋತ್ಸವ ಆಚರಣೆಗೂ ಕಾಂಗ್ರೆಸ್ ನಿಯಮಗಳನ್ನು ಹೇರಲಿದೆ. ಚುನಾವಣೆ ಬಂದಾಗ ಹಿಂದೂ ಆಗುವ ಡಿ.ಕೆ. ಶಿವಕುಮಾರ್, ಉಳಿದ ಸಮಯದಲ್ಲಿ ಮುಸ್ಲಿಮರ ಬ್ರದರ್ ಆಗುತ್ತಾರೆ ಎಂದು ಆರ್. ಅಶೋಕ್ ವಾಗ್ದಾಳಿ ನಡೆಸಿದರು.

## ನಕಲಿ ಔಷಧ ಮಾಫಿಯಾ ವಿರುದ್ಧ ಕಠಿಣ ಕ್ರಮ: ಯು.ಟಿ. ಖಾದರ್

1ನೇ ಪುಟದಿಂದ..

ಹೆಸರನ್ನು ಬಳಸುವುದು ಹಾಗೂ ದೊಡ್ಡ ಆಸ್ಪತ್ರೆಗಳಿಗೆ ಔಷಧಗಳನ್ನು ಸರಬರಾಜು ಮಾಡುವಂತಹ ವ್ಯವಸ್ಥಿತ ಜಾಲದ ಕುರಿತು ತನಿಖೆ ನಡೆ–ಯುತ್ತಿದೆ ಎಂದರು.

ಎಸ್‌ಐಟಿ ತನಿಖೆ ನಡೆಯುತ್ತಿರುವ ಸಂದರ್ಭದಲ್ಲಿ ಪ್ರಕರಣದ ಎಲ್ಲಾ ವಿವರಗಳನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ. ತನಿಖೆ ಪೂರ್ಣಗೊಂಡ ಬಳಿಕ ಪ್ರಕರಣಕ್ಕೆ ಸಂಬಂಧಿಸಿದ ಸಂಪೂರ್ಣ ಮಾಹಿತಿಯನ್ನು ಸಾರ್ವಜನಿಕವಾಗಿ ಸ್ಪಷ್ಟಪಡಿಸಲಾಗುವುದು. ನಕಲಿ ಔಷಧಗಳ ದಂಧೆಯಲ್ಲಿ ಯಾರೇ ಭಾಗಿಯಾಗಿದ್ದರೂ, ಅವರು ಎಷ್ಟೇ ಪ್ರಭಾವಶಾಲಿ ಆಗಿದ್ದರೂ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಒತ್ತಡಕ್ಕೂ ಮಣಿಯದೆ ಅಕ್ರಮ ಜಾಲವನ್ನು ಮಟ್ಟಹಾಕಲಾಗುವುದು ಎಂದು ಖಾದರ್ ಸ್ಪಷ್ಟಪಡಿಸಿದರು. ಒಂದು ಕಡೆ ಇಂತಹ ಅಕ್ರಮ ಔಷಧಗಳ ತಯಾರಿಕೆ ಅಥವಾ ಸರಬರಾಜಿಗೆ ನಿಷೇಧ ಹೇರಿದರೆ, ಮತ್ತೊಂದು ಕಡೆ ಅದೇ ದಂಧೆ ಹೊಸ ರೂಪದಲ್ಲಿ ಆರಂಭವಾಗುವ ಸಾಧ್ಯತೆಯಿದೆ. ಹೀಗಾಗಿ ನಕಲಿ ಔಷಧಗಳ ಮಾಫಿಯಾಕ್ಕೆ ಶಾಶ್ವತವಾಗಿ ಕಡಿವಾಣ ಹಾಕಲು ಕೇಂದ್ರ ಮಟ್ಟದಲ್ಲೇ ಪರಿಣಾಮಕಾರಿ ಹಾಗೂ ಕಟ್ಟುನಿಟ್ಟಿನ ನಿಯಮಗಳನ್ನು ರೂಪಿಸುವ ಅಗತ್ಯವಿದೆ ಎಂದು ಅವರು ಒತ್ತಾಯಿಸಿದರು.

ಅನಂತ ಜನಶಕ್ತಿ
ದಿನಪತ್ರಿಕೆಗೆ ಪತ್ರಿಕೆಗೆ ಸುದ್ದಿ
ಮತ್ತು ಜಾಹೀರಾತು ನೀಡಲು
ಕೂಡಲೇ ಸಂಪರ್ಕಿಸಿ

# ಸಿಲಿಕಾನ್ ಸಿಟಿಯಲ್ಲಿ ಗಣೇಶ ಹಬ್ಬದ ಖರೀದಿ ಜೋರು



ಬೆಂಗಳೂರು : ಸಿಲಿಕಾನ್ ಸಿಟಿಯಲ್ಲಿ ಗಣೇಶ ಹಬ್ಬದ ಖರೀದಿ ಜೋರಾಗಿದೆ. ಬೆಳ್ಳಂಬೆಳಗ್ಗೆ ನಗರದ ಪ್ರಮುಖ ಮಾರುಕಟ್ಟೆಗಳಲ್ಲಿ ಜನಸಂದಣಿ ಕಂಡುಬಂದಿದ್ದು, ವಿಶೇಷವಾಗಿ ಕೆಆರ್ ಮಾರ್ಕೆಟ್‌ನಲ್ಲಿ ಹಬ್ಬದ ಸಾಮಗ್ರಿಗಳ ಖರೀದಿಗೆ ಗ್ರಾಹಕರು ಮಂದಿ ಮುಗಿಬಿದ್ದಿದ್ದಾರೆ.

ಗೌರಿ-ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಮನೆಗಳ ಅಲಂಕಾರ, ಪೂಜೆ ಹಾಗೂ ಗಣೇಶನ ಪ್ರತಿಷ್ಠಾಪನೆಗೆ ಅಗತ್ಯವಿರುವ ಹೂವು, ತೋರಣ, ಮಾವಿನ ಎಲೆ, ಬಾಳೆ ದಿಂಡು ಸೇರಿದಂತೆ ವಿವಿಧ ಪೂಜಾ ಸಾಮಗ್ರಿಗಳ ಖರೀದಿ ಭರದಿಂದ ಸಾಗುತ್ತಿದೆ. ಕೆಆರ್ ಮಾರ್ಕೆಟ್‌ನ ಹೂವಿನ ಮಾರುಕಟ್ಟೆಯಲ್ಲಿ ಗ್ರಾಹಕರ ದಂಡು ಹೆಚ್ಚಾಗಿದ್ದು, ವ್ಯಾಪಾರ ವಹಿವಾಟು ಚುರುಕುಗೊಂಡಿದೆ.ಆದರೆ, ಹಬ್ಬದ ಸಂಭ್ರಮದಲ್ಲಿರುವ ಜನರಿಗೆ ಬೆಲೆ ಏರಿಕೆಯ ಬಿಸಿಯೂ ತಟ್ಟಿದೆ.

ಸಾಮಾನ್ಯ ದಿನಗಳಿಗೆ ಹೋಲಿಸಿದರೆ ಹೂವು ಹಾಗೂ ಹಬ್ಬದ ಅಲಂಕಾರಿಕ ಸಾಮಗ್ರಿಗಳ ಬೆಲೆಯಲ್ಲಿ ಗಣನೀಯ ಏರಿಕೆ ಕಂಡುಬಂದಿದೆ. ಗಣೇಶನ ಪೂಜೆಗೆ ಹೆಚ್ಚಿನ ಪ್ರಮಾಣದಲ್ಲಿ ಬಳಸುವ ಸೇವಂತಿ, ಗುಲಾಬಿ, ಮಲ್ಲಿಗೆ, ಕನಕಾಂಬರ ಸೇರಿದಂತೆ ಹಲವು ಹೂವುಗಳ ಬೆಲೆ ಏರಿಕೆಯಾಗಿದೆ.

ಪ್ರಸ್ತುತ ಕೆಆರ್ ಮಾರ್ಕೆಟ್‌ನಲ್ಲಿ ಸೇವಂತಿ ಹೂವು ಪ್ರತಿ ಕೆಜಿಗೆ ಸುಮಾರು 350 ರೂಪಾಯಿಗೆ ಮಾರಾಟವಾಗುತ್ತಿದೆ. ಬಟನ್ ಗುಲಾಬಿ ಕೂಡ ಕೆಜಿಗೆ 350 ರೂಪಾಯಿಗೆ ತಲುಪಿದೆ. ವಿವಿಧ ಹೂವುಗಳ ಮಿಶ್ರಣವು ಗುಣಮಟ್ಟಕ್ಕೆ ಅನುಗುಣವಾಗಿ ಕೆ-ಜಿಗೆ 300ರಿಂದ 400 ರೂಪಾಯಿವರೆಗೆ ಮಾರಾಟವಾಗುತ್ತಿದೆ.

ಗಣೇಶ ಪೂಜೆ ಮತ್ತು ಮನೆ ಅಲಂಕಾರಕ್ಕೆ ಪ್ರಮುಖವಾಗಿ ಬಳಸುವ ತಾವರೆ ಹೂವು ಜೋಡಿಗೆ 50 ರೂಪಾಯಿ ದರದಲ್ಲಿ ಲಭ್ಯವಿದೆ. ಕನಕಾಂಬರ ಮತ್ತು ಮಲ್ಲಿಗೆ ಹೂವಿನ ಬೆಲೆಯಲ್ಲೂ ಏರಿಕೆ ಕಂಡುಬಂದಿದ್ದು, ಕನಕಾಂಬರದ ಒಂದು ಮೊಳಕ್ಕೆ 50 ರೂಪಾಯಿ ಹಾಗೂ ಕೆಜಿಗೆ ಸುಮಾರು 2,000 ರೂಪಾಯಿ ದರವಿದೆ.

ಮಲ್ಲಿಗೆಯ ಒಂದು ಮೊಳಕ್ಕೆ 50 ರೂಪಾಯಿ ಹಾಗೂ ಕೆಜಿಗೆ ಸುಮಾರು 1,000 ರೂಪಾಯಿ ಬೆಲೆ ಇದೆ.ಹಬ್ಬದ ಅಲಂಕಾರಕ್ಕೆ ಅಗತ್ಯವಾದ ತೋರಣಗಳಿಗೂ ಬೇಡಿಕೆ ಹೆಚ್ಚಾಗಿದೆ. ತುಳಸಿ ತೋರಣ ಒಂದು ಮೊಳಕ್ಕೆ 60 ರೂಪಾಯಿ ದರದಲ್ಲಿದ್ದು, ಮಾವಿನ ಎಲೆ ಒಂದು ಕಟ್ಟಿಗೆ 10ರಿಂದ 30 ರೂಪಾಯಿವರೆಗೆ ಮಾರಾಟವಾಗುತ್ತಿದೆ. ಹಬ್ಬದ ದಿನ ಸಮೀಪಿಸುತ್ತಿದ್ದಂತೆ ಹೂವು ಹಾಗೂ ಪೂಜಾ ಸಾಮಗ್ರಿಗಳ ಬೆಲೆ ಇನ್ನಷ್ಟು ಏರಿಕೆಯಾಗುವ ಸಾಧ್ಯತೆಯೂ ಇದೆ.

# ಬ್ಯಾಂಕ್ ಸಿಬ್ಬಂದಿ ಕಣ್ಣಿಗೆ ಖಾರದ ಪುಡಿ ಎರಚಿ 4.53 ಲಕ್ಷ ದರೋಡೆ:

1ನೇ ಪುಟದಿಂದ..

ಲೂಟಿ ಮಾಡಿದ್ದ ಕಳ್ಳನನ್ನು ಪೊಲೀಸರು ಕೇವಲ 30 ನಿಮಿಷಗಳಲ್ಲಿ ಸಿನಿಮೀಯ ಮಾದರಿಯಲ್ಲೇ ಬೆನ್ನಟ್ಟಿ ಹಿಡಿದಿದ್ದಾರೆ. ನಾಗ್ಪುರದ ಸಕ್ಕರದರಾ ಪ್ರದೇಶದಲ್ಲಿರುವ ಎಸ್‌ಬಿಐ ಶಾಖೆಯಲ್ಲಿ ಈ ಆಘಾತಕಾರಿ ಘಟನೆ ಸಂಭವಿಸಿದ್ದು, ಬಂಧಿತ ಆರೋಪಿಯನ್ನು ಸೂರಜ್ ಬೋಜ್‌ರಾಜ್ ಬೋರ್ಕರ್ ಎಂದು ಗುರುತಿಸಲಾಗಿದೆ. ಆ ಕುರಿತ ವರದಿ ಇಲ್ಲಿದೆ:

ನಾಗ್ಪುರದ ಸಕ್ಕರದರಾ ವ್ಯಾಪ್ತಿಯ ಭಾಂಡೆ ಪ್ಲಾಟ್‌ನಲ್ಲಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿ-ಯಾ ಬ್ಯಾಂಕ್ ಶಾಖೆಯಲ್ಲಿ ಸಾಯಂಕಾಲ, ಬ್ಯಾಂಕ್ ಸಿಬ್ಬಂದಿ ಎಟಿಎಂನಿಂದ ನಗದು ಸಂಗ್ರಹಿಸಿ ತಂದು ಕ್ಯಾಶ್ ಕೌಂಟರ್‌ನಲ್ಲಿ ಇಡುತ್ತಿದ್ದಾಗ, ಗ್ರಾಹಕನ ಸೋಗಿನಲ್ಲಿ ಮುಖ ಮುಚ್ಚಿಕೊಂಡು ಬಂದಿದ್ದ ಆರೋಪಿಯು ಹಠಾತ್ತನೆ ಸುಮಾರು ಅರ್ಧ ಕೆಜಿಯಷ್ಟು ತಂದಿದ್ದ ಖಾರದ ಪುಡಿಯನ್ನು ಸಿಬ್ಬಂದಿಯ ಕಣ್ಣಿಗೆ ಎರಚಿದ್ದಾನೆ. ಕಣ್ಣು ಉರಿಯಿಂದ ಸಿಬ್ಬಂದಿ ಚೀರಾಡುತ್ತಿದ್ದಂತೆ ಕೌಂಟರ್ ಮೇಲಿದ್ದ 4.53 ಲಕ್ಷ ಹಣದ ಬ್ಯಾಗ್ ಅನ್ನು ಎಗರಿಸಿ ಆರೋಪಿ ಸೂರಜ್ ಬೋಜ್‌ರಾಜ್ ಬೋರ್ಕರ್ ಅಲ್ಲಿಂದ ಕಾಲ್ಕಿತ್ತಿದ್ದಾನೆ.

ಮುಂದುವರೆದು, ಕಳ್ಳತನ ನಡೆದ ತಕ್ಷಣ ಬ್ಯಾಂಕ್ ಸಿಬ್ಬಂದಿ ಜೋರಾಗಿ ಕೂಗಾಡಿ ಆತನನ್ನು ಬೆನ್ನಟ್ಟಿದ್ದಾರೆ. ಇದೇ ವೇಳೆ ಸುತ್ತಮುತ್ತ ಗಸ್ತಿನಲ್ಲಿದ್ದ ಪೊಲೀಸರು ತಕ್ಷಣ ಕಾರ್ಯಪ್ರವೃತ್ತರಾಗಿದ್ದು, ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ಕೇವಲ 30 ನಿಮಿಷಗಳಲ್ಲಿ, ಬ್ಯಾಂಕ್‌ನಿಂದ ಕೇವಲ 1 ಕಿಲೋಮೀಟರ್ ದೂರದಲ್ಲಿ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ. ಏತನ್ಮಧ್ಯೆ, ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಬಂಧಿತ ಸೂರಜ್ ಬೋರ್ಕರ್ ಷೇರು ಮಾರುಕಟ್ಟೆಯಲ್ಲಿ ಭಾರಿ ಹಣ ಕಳೆದುಕೊಂಡು ಸಾಲದ ಸುಳಿಗೆ ಸಿಲುಕಿದ್ದ ಎಂದು ತಿಳಿದುಬಂದಿದೆ. ಸಾಲ ತೀರಿಸಲು ಮತ್ತು ಸುಲಭವಾಗಿ ಹಣ ಗಳಿಸುವ ದುರಾಸೆಯಿಂದ ಈ ಕೃತ್ಯ ಎಸಗಿದ್ದಾನೆ.

ಬಂಧಿತ ಆರೋಪಿಯನ್ನು 28 ವರ್ಷದ ಸೂರಜ್ ಭೋಜರಾಜ್ ಬೋರ್ಕರ್ ಎಂದು ಗುರುತಿಸಲಾಗಿದೆ. ಈತ ಬಿಎಸ್‌ಸಿ ಪದವೀಧರನಾಗಿದ್ದು, ಸದ್ಯ ಯಾವುದೇ ಕೆಲಸವಿಲ್ಲದೆ ನಿರುದ್ಯೋಗಿಯಾಗಿದ್ದ ಹಾಗೂ ಶೇರ್ ಮಾರ್ಕೆಟ್‌ನಲ್ಲಿ ಲಕ್ಷಾಂತರ ರೂಪಾಯಿ ಕಳೆದುಕೊಂಡು ಸಾಲದ ಸುಳಿಗೆ ಸಿಲುಕಿದ್ದ-ರಿಂದ ಈ ದರೋಡೆಗೆ ಸ್ಕೆಚ್ ಹಾಕಿದ್ದ ಎಂದು ತನಿಖೆಯಿಂದ ತಿಳಿದುಬಂದಿದೆ. ಈ ಇಡೀ ದರೋಡೆಯ ದೃಶ್ಯಾವಳಿಗಳು ಬ್ಯಾಂಕ್‌ನ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆ-ಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

# ಬಾಲಕ ಕೆರೆಯಲ್ಲಿ ಮುಳುಗಿ ಸಾವು

1ನೇ ಪುಟಿದಂದ..

ಈಜಲಾಗದೇ ನಾಪತ್ತೆಯಾಗಿದ್ದಾನೆ. ಸ್ಥಳೀಯರಿಂದ ಪೊಲೀಸ್&ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದಾರೆ. ಸೋಮಿನಕೊಪ್ಪ ಕೆರೆಯಲ್ಲಿ ಅಗ್ನಿಶಾಮಕ ದಳದಿಂದ ಬಾಲಕನಿಗಾಗಿ ಶೋಧ ನಡೆಸಿದ್ದಾರೆ. ತೀವ್ರ ಶೋಧದ ಬಳಿಕ ಬಾಲಕನ ಮೃತದೇಹ ಪತ್ತೆಯಾಗಿದ್ದು, ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ವಿನೋಬನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ದೆಹಲಿಯಲ್ಲಿ ಮತ್ತೊಂದು ಅವಘಡ: ಭಾರಿ ಬೆಂಕಿ ದುರಂತ

1ನೇ ಪುಟದಿಂದ..

ಮೊದಲ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಕಾರ್ಖಾನೆಯು ಜೂಡೋ ಬಟ್ಟೆ ಮತ್ತು ಬಾಕ್ಸಿಂಗ್ ಕೈಗವಸುಗಳನ್ನು ತಯಾರಿಸುತ್ತದೆ. ಬೆಂಕಿಯಲ್ಲಿ ಯಾರಿಗೂ ಗಾಯಗಳಾಗಿಲ್ಲ. ಆದಾಗ್ಯೂ, ಪಕ್ಕದ ಕಟ್ಟಡದ ಕೆಲವು ನಿವಾಸಿಗಳು ಭಯಭೀತರಾಗಿ ತಮ್ಮ ಮನೆಗಳಿಂದ ಹಾರಿದರು. ಆರು ಜನರು ಗಾಯಗೊಂಡಿದ್ದಾರೆ. ಎಲ್ಲರನ್ನೂ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಅಪಾಯದಿಂದ ಪಾರಾಗಿದ್ದಾರೆ. ಅಗ್ನಿಶಾಮಕ ದಳದ ವಾಹನಗಳು ಸ್ಥಳದಲ್ಲಿದ್ದು, ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದೆ.

ಡಿಸಿಪಿ ಎ.ಕೆ. ಜೈಸ್ವಾಲ್, ಎಡಿಒ ವೈ.ಎಸ್. ಮೀನಾ ಮೂಲಕ, ಬೆಂಕಿ ನಿಯಂತ್ರಣಕ್ಕೆ ನಿರ್ದೇಶನ ನೀಡಿ, ರೆಕ್ಸಿನ್ ಚೂರುಚೂರು ಮತ್ತು ಹತ್ತಿ ನೇಯ್ಗೆಗಾಗಿ ಗೋದಾಮಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂದು ಹೇಳಿದರು. ಕಟ್ಟಡವು ನೆಲಮಾಳಿಗೆ, ಮೊದಲ ಮಹಡಿ ಮತ್ತು ಎರಡನೇ ಮಹಡಿಯಲ್ಲಿ ಟಿನ್ ಶೆಡ್ ಅನ್ನು ಹೊಂದಿದ್ದು, 200 ಚದರ ಗಜಗಳಷ್ಟು ವಿಸ್ತೀರ್ಣವನ್ನು ಹೊಂದಿದೆ.

# ಶ್ರೀ ತೋಟಪ್ಪ ತಾತನವರ ಜಾತ್ರಾ ಪ್ರಯುಕ್ತ ಜನಪದ ಗೀತೆ ಗಾಯನ ಕಾರ್ಯಕ್ರಮ

ಬಳ್ಳಾರಿ ,ಅನಂತ ಜನಶಕ್ತಿ ನ್ಯೂಸ್

ತಾಲೂಕಿನ ಗಡಿಭಾಗದ ರಾಯಪುರ ಬಲಗುಡ್ಡ ಗ್ರಾಮದಲ್ಲಿ ನಿನ್ನೆ ಶನಿವಾರ ಜರುಗಿದ ಶ್ರೀ ತೋಟಪ್ಪ ತಾತನವರ ಜಾತ್ರೆಯ ಅಂಗವಾಗಿ ಶ್ರೀ ವೀರಭದ್ರೇಶ್ವರ ಬಯಲಾಟ ಕಲಾವಿದರ ಸಂಘ, ಮೋಕ ಗೋನಾಳ್ ಬಳ್ಳಾರಿ ವತಿಯಿಂದ ಕಲಾವಿದ ನಾಗನಗೌಡ ಇವರ ನೇತೃತ್ವದಲ್ಲಿ ಜಾನಪದ ಗೀತೆ ಗಾಯನ ಕಾರ್ಯಕ್ರಮವನ್ನು ಪ್ರಸ್ತುತಪಡಿಸಲಾಯಿತು.

ಈ ಗೀತ ಗಾಯನ ಕಾರ್ಯಕ್ರಮ ಗ್ರಾಮದ ಹಿರಿಯ ಮುಖಂಡರಾದ ವೀರಭದ್ರಯ್ಯ ಸ್ವಾಮಿ ಮಠದ ಪೀಠಾಧಿಪತಿ ಮಾತನಾಡಿ ಎಲ್ಲಾ ಸಂಗೀತಕ್ಕೂ ತಾಯಿ ಬೇರು ಜನಪದ ಸಂಗೀತವಾಗಿದೆ ಸಂಗೀತವು ಎಲ್ಲರನ್ನೂ ಮಂತ್ರಮುಕ್ತವಾಗಿಸುತ್ತದೆ ಮತ್ತು ಸಂಗೀತ ಆಲಿಸುವುದರಿಂದ ಮಾನಸಿಕ ಒತ್ತಡವನ್ನು ಕಡಿಮೆ ಮಾಡಿಕೊಳ್ಳಬಹುದು ಎಂದರು. ಗ್ರಾಮದ ಹಿರಿಯರಾದ ಕೃಷ್ಣಪ್ಪ ಇವರ ಆಶೀರ್ವಾದದಿಂದ ಕಾರ್ಯಕ್ರಮವು ಯಶಸ್ವಿಯಾಗಿ ಜರಗಿತು. ಈ ಕಾರ್ಯಕ್ರಮದಲ್ಲಿ ಗಾಯಕರಾದ ಹುಲುಗಪ್ಪ, ಹನುಮಯ್ಯ ಮತ್ತು ಸಂಗಡಿಗರು ಜನಪದ ಗೀತ ಗಾಯನ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಇವರಿಗೆ ಹಾರ್ಮೋನಿಯಂ ಮುದ್ದಟನೂರು ತಿಪ್ಪೇಸ್ವಾಮಿ ಕಾಶಿಯು ವೀರಭದ್ರ ಸ್ವಾಮಿ ತಬಲಾ ಖಾಸಿಂ ಸೇರಿದಂತೆ ಇತರರು ಸಂಗೀತ ಸಾತ್ ನೀಡಿದರು. ಈ ಗೀತ ಗಾಯನ ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಗಂಗಾಧರಪ್ಪ



, ಜ್ಞಾನಮೂರ್ತಿ ಸ್ವಾಮಿ ಸೇರಿದಂತೆ ಹಲವಾರು ಜನ ಸಂಗೀತ ಆಸಕ್ತರು ಮತ್ತು ಗ್ರಾಮದ ಸಾರ್ವಜನಿಕರು ಇದ್ದರು.

# ಕರವೇ ಎತ್ತಿನ ಬೂದಿಹಾಳ ಗ್ರಾಮ ಘಟಕದ ಅಧ್ಯಕ್ಷರಾಗಿ ಅಜಯ್ ನೇಮಕ



ಬಳ್ಳಾರಿ : ಕರ್ನಾಟಕ ರಕ್ಷಣಾ ವೇದಿಕೆ (ಶಿವರಾಮೇಗೌಡ ಬಣ) ದ ತಾಲೂಕಿನ ಎತ್ತಿನಬೂದಿ ಹಾಳ್ ಗ್ರಾಮ ಘಟಕದ ಅಧ್ಯಕ್ಷರನ್ನಾಗಿ ಅಜಯ್ ಅವರನ್ನು ನೇಮಕ ಮಾಡಲಾಯಿತು.

ಇಂದು ಭಾನುವಾರದಂದು ನಗರದ ಪಾರ್ವತಿ ನಗರದಲ್ಲಿರುವ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಕಛೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಎತ್ತಿನ ಬೂದಿಹಾಳ್ ಗ್ರಾಮದ ಹಲವು ಕನ್ನಡ ಕಾರ್ಯಕರ್ತರನ್ನು ವೇದಿಕೆಗೆ ಸ್ವಾಗತಿಸಿ ಎಲ್ಲರ ಸಮ್ಮುಖದಲ್ಲಿ ವಿಜಯನಗರ ಮತ್ತು ಬಳ್ಳಾರಿ ಜಿಲ್ಲಾಧ್ಯಕ್ಷ ಕುರಿಹಟ್ಟಿ ರಾಜಣ್ಣ (ರಾಜಶೇಖರ್ ) ಅಜಯ್ ಅವರನ್ನು ಗ್ರಾಮ ಘಟಕದ ಅಧ್ಯಕ್ಷ ಎಂದು ಘೋಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಜಣ್ಣ, ಕೇವಲ ಕನ್ನಡ ಶಾಲು ಹಾಕಿಕೊಂಡು ತೋರಿಕೆಗಾಗಿ ಮಾತ್ರ ರಕ್ಷಣಾ ವೇದಿಕೆಯ ಕಾರ್ಯಕರ್ತರ ಆಗಬಾರದು ಕನ್ನಡ ನಾಡು ನುಡಿಯ ಬಗ್ಗೆ ಸದಾ ಕಾಳಜಿಯನ್ನು ವಹಿಸುವ ಗುಣವನ್ನು ಬೆಳೆಸಿಕೊಳ್ಳಬೇಕು ರಾಜ್ಯದ ಹಿತಾಸಕ್ತಿಗೆ ಕನ್ನಡ ಭಾಷೆಗೆ ಧಕ್ಕೆ ಬಂದಾಗ ಮುಂಚೂಣಿಯಲ್ಲಿ ನಿಂತು ಹೋರಾಟ ಮಾಡಲು ಹಿಂಜರಿಯಬಾರದು ಮತ್ತು ಸಮಾಜದಲ್ಲಿ ಅಮಾಯಕ ಜನರಿಗೆ ಅನ್ಯಾಯವಾದಲ್ಲಿ ನ್ಯಾಯ ಒದಗಿಸಲು ಹೋರಾಟಕ್ಕೆ ಸಿದ್ಧರಾಗಿರಬೇಕು, ವೇದಿಕೆಯ ನಿಯಮ ನಿಬಂಧನೆಗಳನ್ನು ತತ್ವ ಸಿದ್ಧಾಂತಗಳನ್ನು ಮೆಚ್ಚಿಕೊಂಡು ಸ್ವ ಇಚ್ಛೆಯಿಂದ ವೇದಿಕೆಗೆ ಸೇರ್ಪಡೆಗೊಂಡಿರುವ ಎಲ್ಲರೂ ನಿಯಮ ನಿಬಂಧನೆಗಳನ್ನು ಮೀರದೆ ನಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಜೊತೆಗೆ ಯಾರು ಸಹ ವೇದಿಕೆ ಹೆಸರನ್ನು ದುರುಪಯೋಗ ಮಾಡಿಕೊಳ್ಳಬಾರದು ಅನ್ಯಾಯ ಕಂಡಲ್ಲಿ ಹಿಂದೂ ಮುಂದು ನೋಡದೆ ಪ್ರತಿಭಟನೆಗೆ ಮುಂದಾಗಬೇಕು ಎಂದು ನೂತನ ಜಿಲ್ಲಾಧ್ಯಕ್ಷ ಅಜಯ್ ಮತ್ತು ಗ್ರಾಮ ಘಟಕದ ಇತರ ಪದಾಧಿಕಾರಿಗಳಿಗೆ ತಿಳಿಸಿದರು. ಈ ಸಂದರ್ಭದಲ್ಲಿ ನೂತನವಾಗಿ ಗ್ರಾಮ ಘಟಕ ಜಿಲ್ಲಾಧ್ಯಕ್ಷರಾಗಿ ನೇಮಕವಾದ ಅಜಯ್ ಮಾತನಾಡಿ, ಜಿಲ್ಲಾಧ್ಯಕ್ಷ ರಾಜಣ್ಣನವರು ನನ್ನನ್ನು ಒಂದೇ ಮಾತಿಗೆ ಗ್ರಾಮ ಘಟಕದ ಅಧ್ಯಕ್ಷರನ್ನಾಗಿ ನೇಮಕ ಮಾಡಿದ್ದಾರೆ ನನ್ನ ಮೇಲೆ ಅವರು ಹೊಂದಿರುವ ನಂಬಿಕೆ ಮತ್ತು ವಿಶ್ವಾಸವನ್ನು ಉಳಿಸಿಕೊಂಡು ವೇದಿಕೆಯನ್ನು ನಮ್ಮ ಗ್ರಾಮದ ಅಕ್ಕ ಪಕ್ಕದಲ್ಲಿ ಮತ್ತು ಗ್ರಾಮೀಣ ಪ್ರದೇಶದಲ್ಲಿ ಸಂಘಟಿಸುವುದಾಗಿ ತಿಳಿಸಿದರು. ಇದೇ ಸಂದರ್ಭದಲ್ಲಿ ಗ್ರಾಮ ಘಟಕದ ಗೌರವ ಅಧ್ಯಕ್ಷರನ್ನಾಗಿ ನಾಗಭೂಷಣ್, ಉಪಾಧ್ಯಕ್ಷರಾಗಿ ತಳಾರಿ ಬಸಪ್ಪ ಖಜಾಂಚಿಯಾಗಿ ಕೆ ಬಸಪ್ಪ ಇವರುಗಳನ್ನು ಪದಾಧಿಕಾರಿಗಳನ್ನಾಗಿ ನೇಮಕ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಘಟಕದ ಉಪಾಧ್ಯಕ್ಷ ಉಪಾಧ್ಯಕ್ಷರಾದ ಮಾರಣ್ಣ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಕಟಗಿ ಸೂರಿ ರಾಜಶೇಖರ್ ರಾಜು ಉಮೇಶ್ ಜಡೆಪ್ಪ ಮೊಕ ಮಲ್ಲಯ್ಯ ಕಚೇರಿ ಕಾರ್ಯದರ್ಶಿ ನರೇಶ್ ವಿಜಯಕುಮಾರ್ ರಾಮು ಈಶ್ವರ್ ಮತ್ತು ಗ್ರಾಮ ಘಟಕದ ಸದಸ್ಯರಾದ ನಂದೀಶ ಸ್ವಾಮಿ ಗಣೇಶ್ ವಿಜಯ ಭಾಸ್ಕರ್ ನಾಗೇಶ್ ರಾಮಾಂಜನಿ ಭರತ್ ಕುಮಾರ್ ವೀರಭದ್ರ ಸ್ವಾಮಿ ಅನಿಲ್ ನಿಖಿಲ್ ಸೇರಿದಂತೆ ಇತರರಿದ್ದರು.

# ಬಳ್ಳಾರಿ ಚಲೋ ಪಾದಯಾತ್ರೆ: ಸೋಮಶೇಖರ್ ರೆಡ್ಡಿ, ರೇಣುಕಾಚಾರ್ಯ ಸಹಿತ 22 ಬಿಜೆಪಿ ನಾಯಕರ ವಿರುದ್ಧ ಎಫ್‌ಐಆರ್





ಬಳ್ಳಾರಿ: ರಾಜ್ಯ ಸರಕಾರದ ವಿರುದ್ಧ ಬಿಜೆಪಿ ಹಮ್ಮಿಕೊಳ್ಳಲಾಗಿದ್ದ 'ಬಳ್ಳಾರಿ ಚಲೋ' ಪಾದಯಾತ್ರೆಯ ವೇಳೆ ನಿಯಮ ಮೀರಿ ಪ್ರತಿಭಟನೆ ನಡೆಸಿದ ಆರೋಪದ ಮೇಲೆ ಮಾಜಿ ಶಾಸಕರಾದ ಜಿ. ಸೋಮಶೇಖರ ರೆಡ್ಡಿ ಮತ್ತು ಎಂ.ಪಿ. ರೇಣುಕಾಚಾರ್ಯ ಸೇರಿದಂತೆ 22 ಬಿಜೆಪಿ ನಾಯಕರ ವಿರುದ್ಧ ಬಳ್ಳಾರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಮ್ಮರಚೇಡು ಗ್ರಾಮದಿಂದ ಬಳ್ಳಾರಿ ನಗರದವರೆಗೆ ಹಮ್ಮಿಕೊಳ್ಳಲಾಗಿದ್ದ ಪಾದಯಾತ್ರೆಯ ಮಾರ್ಗದುದ್ದಕ್ಕೂ ಜಿಲ್ಲಾಧಿಕಾರಿಯ ಆದೇಶವನ್ನು ಮೀರಿ, ಪೂರ್ವಾನುಮತಿಯಿಲ್ಲದೆ ಬ್ಯಾನರ್ ಹಾಗೂ ಬಾವುಟಗಳನ್ನು ಅಳವಡಿಸಲಾಗಿತ್ತು. ನಿಯಮಬಾಹಿರವಾಗಿದ್ದ ಈ ಬ್ಯಾನರ್ ಗಳನ್ನು ಮಹಾನಗರ ಪಾಲಿಕೆ ಸಿಬ್ಬಂದಿ ತೆರವುಗೊಳಿಸಿದ್ದರು. ಇದನ್ನು ಖಂಡಿಸಿ ಸೆಪ್ಟಂಬರ್ 9ರಂದು ಬಳ್ಳಾರಿ-ಹೊಸಪೇಟೆ ರಾಷ್ಟ್ರೀಯ ಹೆದ್ದಾರಿ 67ರಲ್ಲಿ ರಸ್ತೆ ಸಂಚಾರ ತಡೆದು ಸಾರ್ವಜನಿಕರಿಗೆ ಅಡ್ಡಿಪಡಿಸಿದ ಹಿನ್ನೆಲೆಯಲ್ಲಿ ಪೊಲೀಸರು ಈ ಕಾನೂನು ಕ್ರಮ ಜರುಗಿಸಿದ್ದಾರೆ ಎಂದು ತಿಳಿದುಬಂದಿದೆ.

# ಮಣ್ಣಿನ ಗಣೇಶ ತಯಾರಿಸಿ ಪರಿಸರ ಜಾಗೃತಿ ಮೂಡಿಸಿದ ವಿದ್ಯಾರ್ಥಿನಿ ಎಸ್.ಎಂ. ಸಹನಾ.

ಬಳ್ಳಾರಿ : ಭಕ್ತಿ ಭಾವೈಕ್ಯತೆ ರೂಪದ ಹಬ್ಬ ಗಣೇಶ ಚತುರ್ಥಿಯಾಗಿದ್ದು, ಇತ್ತೀಚಿನ ದಿನಗಳಲ್ಲಿ ತನ್ನ ನಿಜ ಅರ್ಥವನ್ನು ಕಳೆದುಕೊಳ್ಳುತ್ತಿರುವುದು ಬೇಸರದ ಸಂಗತಿಯಾಗಿದೆ. ಗಣೇಶ ಹಬ್ಬ ಈಗ ಆಡಂಬರ, ಮಾಲಿನ್ಯ, ಪರಿಸರ ಹಾನಿಗೆ ಕಾರಣವಾಗುತ್ತಿದ್ದು, ಇದರ ಪ್ರತಿಯಾಗಿ ಪರಿಹಾರವಾಗಿ ಪರಿಸರಸ್ನೇಹಿ ಗಣಪತಿ ಹಬ್ಬದ ಆಚರಣೆಯ ಹೊಸ ಪರಂಪರೆ ಕಟ್ಟುನಿಟ್ಟಿನ ಆದೇಶ ಜಾರಿಗೆ ತಂದಿರುವುದು ಪರಿಸರಪ್ರಿಯರಿಗೆ ಸಂತೋಷವನ್ನುಂಟುಮಾಡಿದೆ.ಗಣಪತಿಯುನ್ನು ಬಣ್ಣಗಳಿಂದ ಚಂದದ ಅಲಂಕರಿಸಿ ಉತ್ಸಾಹದಿಂದ ಆಚರಿಸಲು ಬಯಸುತ್ತಾರೆ ಆದರೆ ಗಣೇಶನ ಮೂರ್ತಿಯನ್ನು ನೀರಿನಲ್ಲಿ ವಿಸರ್ಜಿಸುವುದರಿಂದ ಪರಿಸರದ ಮೇಲೆ ಆಗುವ ದುಷ್ಪರಿಣಾಮವನ್ನು ಪ್ರತಿಯೊಬ್ಬರು ಅರಿಯಬೇಕಾಗಿದೆ. ರಾಸಾಯನಿಕ ಬಣ್ಣ ಮತ್ತು ಇತರೆ ವಸ್ತುಗಳಿಂದ ತಯಾರಿಸಿದ ಮೂರ್ತಿಯನ್ನು ನೀರಿನಲ್ಲಿ ವಿಸರ್ಜಿಸುವುದರಿಂದ ನೀರಿನ ಮಲಿನವಾಗುತ್ತದೆ ಅಲಂಕಾರಕ್ಕೆ ಬಳಸುವ ಪ್ಲಾಸ್ಟಿಕ್ ಕರಗದೆ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದರಿಂದ ಇದರಲ್ಲಿರುವ ವಿಷದ ಅಂಶವು ಸಸ್ಯ ಮತ್ತು ಜಲ ಚರಗಳ ಮೇಲೆ ಮಾರಕ ಪ್ರಭಾವ ಉಂಟಾಗುತ್ತದೆ. ಇದನ್ನು ಅರಿತ ಜಿಲ್ಲೆಯ ಸಿರುಗುಪ್ಪ ತಾಲೂಕಿನ ಸಿರಿಗೇರಿ ಗ್ರಾಮದ ಯುವತಿ ಎಸ್ ಎಂ ಸಹನಾ ಗ್ರಾಮದ ದಾರುಕ ನಗರದಲ್ಲಿ ಕಳೆದ ಆರು ವರ್ಷಗಳಿಂದ ಪಿಒಪಿ ಗಣೇಶ ನಿಲ್ಲಿಸಿ, ಪ್ರತಿ ವರ್ಷ ವಿಭಿನ್ನ ರೀತಿಯಲ್ಲಿ ಸ್ವತಃ ಪರಿಸರಸ್ನೇಹಿ ವಿಭೂತಿ ಗಣೇಶ, ಗಂಧದ ಗಣೇಶ, ಹರಿಶಿನ ಗಣೇಶ, ಕರಿಮಣ್ಣಿನ ಗಣೇಶ, ಕೆಂಪು ಮಣ್ಣಿನ ಗಣೇಶ, ಅಕ್ಕಿ ಹಿಟ್ಟಿನ ಗಣೇಶ, ತಯಾರಿಸಿ ಗ್ರಾಮದ ಓಣಿಯಲ್ಲಿ ಪರಿಸರ ಜಾಗೃತಿ ಮೂಡಿಸುತ್ತಿದ್ದಾಳೆ.

ಹೀಗೆ ಈ ಸಾರಿ 7ನೇ ವರ್ಷದ ಪರಿಸರ ಸ್ನೇಹಿ ಕುಂಬಾರು ಮಣ್ಣಿನ ಗಣೇಶ ಮೂರ್ತಿಯನ್ನು ಮನೆಯಲ್ಲಿಯೇ ತಯಾರಿಸಿ ಕುಂಬಾರ್ ಮಣ್ಣನ್ನು ತಂದು ಚೆನ್ನಾಗಿ ಹದ ಮಾಡಿ ಭಕ್ತಿಯಿಂದ ಪೂಜೆ ಸಲ್ಲಿಸಿ ಪರಿಸರ ಸ್ನೇಹಿ ವಿಘ್ನ ನಿವಾರಕ ಗಣೇಶನಿಗೆ ಕೊರಳಲ್ಲಿ ಸರ, ಮಡಿವಸ್ತ್ರ, ಕಿರೀಟ, ಕೈಪಟ್ಟಿ, ಗಣೇಶನ ಮೂಶಿಕ ವಾಹನ ಮೋದಕವನ್ನೊಳಗೊಂಡ ಮೂರ್ತಿಯನ್ನು ಮಾಡಿ ತನ್ನ ಮನೆಯಲ್ಲಿ ಪ್ರತಿಷ್ಠಾಪಿಸಿ ಓಣಿಯ ಅಕ್ಕಪಕ್ಕದವರಿಗೆ ಪರಿಸರಸ್ನೇಹಿ ಕುಂಬಾರ ಮಣ್ಣಿನ ಗಣೇಶನನ್ನು ಮಾಡಿ ಉಚಿತವಾಗಿ ವಿತರಿಸಿ ಪಿಓಪಿ ಗಣೇಶ ನಿಲ್ಲಿಸಿ ಇಂತಹ ಪರಿಸರ ಗಣೇಶ ಮೂರ್ತಿ ಮಾಡಿ ಪೂಜಿಸಿ, ಎಂದು ಜಾಗೃತಿ ಹಾಗೂ ಅರಿವು ಮೂಡಿಸುತ್ತಿದ್ದಾಳೆ ಸಿರಿಗೇರಿಯ ಬಿಎಸ್ಸಿ ವಿದ್ಯಾರ್ಥಿ ಎಸ್. ಎಂ. ಸಹನಾಳ ಗಣೇಶ ತಯಾರಿಸುವುದು ಇವರ ವಿಶೇಷತೆಯಾಗಿದೆ.

ಇಷ್ಟೇ ಅಲ್ಲದೆ ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಉಚಿತ ಗಣೇಶ ಹಂಚಿಕೆ ಮಾಡಿ ಕಾಲುವೆ, ನದಿ, ಹಳ್ಳ, ಬಾವಿಯಲ್ಲಿ ವಿಸರ್ಜನೆ ಮಾಡದೆ ಒಂದು ಬಕೀಟಿನಲ್ಲಿ ನೀರು ತುಂಬಿಸಿ, ಪೂಜೆ ಸಲ್ಲಿಸಿ ಅದರಲ್ಲಿ ವಿಸರ್ಜನೆ ಮಾಡಿ ಗಣೇಶ ಕರಗಿದ ನಂತರ ಮನೆ ಆವರಣದಲ್ಲಿ ಬೆಳೆದ ಗಿಡಗಳಿಗೆ ಹಾಕಿ ಅಲ್ಲಿಯೂ



ಸಹ ಪರಿಸರದ ಕಾಳಜಿಯನ್ನು ತೋರಿಸುತ್ತಿದ್ದಾಳೆ. ಈ ನನ್ನ ಪರಿಸರ ಕಾಳಜಿಗೆ ಮನೆಯವರಲ್ಲದೆ ಸುತ್ತಮುತ್ತಲಿನ ಮನೆಯವರು ಪ್ರೋತ್ಸಾಹಿಸುವುದು ನನ್ನ ಪರಿಸರ ಪ್ರೇಮ ಕಾಳಜಿ ಇನ್ನು ಹೆಚ್ಚು ಮಾಡುತ್ತಿದೆ ಎನ್ನುತ್ತಾ ಪ್ರತಿಯೊಬ್ಬ ಗಣೇಶ ಭಕ್ತರು ಪರಿಸರಸ್ನೇಹಿ ಗಣೇಶ ಮೂರ್ತಿಗಳ ಬಳಕೆ ಮಾಡಬೇಕು ಪರಿಸರ ಕಾಪಾಡುವ ಕೆಲಸ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಬೇಕು ಎನ್ನುತ್ತಿದ್ದಾಳೆ ಯುವತಿ ಎಸ್.ಎಮ್. ಸಹನಾ.





# 15.18 ಲಕ್ಷ ಕೊಳವೆ ಬಾವಿ, ಕೆರೆಗಳ ದಾಖಲೀಕರಣ



ಬೆಂಗಳೂರು: ರಾಜ್ಯದಲ್ಲಿ ಏಳನೇ ಸಣ್ಣ ನೀರಾವರಿ ಗಣತಿ ಮತ್ತು ಎರಡನೇ ಜಲಮೂಲಗಳ ಗಣತಿ ಕ್ಷೇತ್ರ ಕಾರ್ಯವನ್ನು ಪೂರ್ಣಗೊಳಿಸಲಾಗಿದ್ದು, ಒಟ್ಟು 15.35 ಲಕ್ಷ ಜಲಮೂಲಗಳನ್ನು ದಾಖಲಿಸಲಾಗಿದೆ ಎಂದು ಸಣ್ಣ ನೀರಾವರಿ ಸಚಿವ ಅಜಯ್ ಸಿಂಗ್ ತಿಳಿಸಿದ್ದಾರೆ.

'ರಾಜ್ಯದ ಜಲಸಂಪನ್ಮೂಲಗಳ ವಾಸ್ತವ ಸ್ಥಿತಿಯನ್ನು ಅರಿತು, ಭವಿಷ್ಯದ ನೀರಾವರಿ ಹಾಗೂ ಜಲಸಂರಕ್ಷಣಾ ಯೋಜನೆಗಳನ್ನು ವೈಜ್ಞಾನಿಕವಾಗಿ ರೂಪಿಸಲು ಈ ಗಣತಿ ಮಹತ್ವದ್ದಾಗಿತ್ತು. ರಾಜ್ಯದ 30,671 ಗ್ರಾಮಗಳು, 300 ನಗರ ಸ್ಥಳೀಯ ಸಂಸ್ಥೆಗಳು ಹಾಗೂ 7,128 ನಗರ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಗಣತಿ ನಡೆಸಲಾಗಿತ್ತು' ಎಂದು ಪ್ರಕಟಣೆಯಲ್ಲಿ ವಿವರಿಸಿದ್ದಾರೆ.

'ಕ್ಷೇತ್ರ ಕಾರ್ಯದ ವೇಳೆ 14.18 ಲಕ್ಷ ಕೊಳವೆಬಾವಿಗಳು, 77,573 ನೀರಾವರಿ ಯೋಜನೆಗಳು ಮತ್ತು 38,960 ಜಲಮೂಲಗಳನ್ನು ದಾಖಲಿಸಲಾಗಿದೆ' ಎಂದು ಮಾಹಿತಿ ನೀಡಿದ್ದಾರೆ.

'ರಾಜ್ಯ ಎದುರಿಸುತ್ತಿರುವ ಬರ, ಅಂತರ್ಜಲ ಕುಸಿತ ಹಾಗೂ ಹವಾಮಾನ ಬದಲಾವಣೆಯ ಸವಾಲುಗಳ ಸಂದರ್ಭದಲ್ಲಿ ನಿಖರವಾದ ಜಲ ದತ್ತಾಂಶ ಅತ್ಯಂತ ಮಹತ್ವದ್ದಾಗಿದೆ. ಯಾವ ಪ್ರದೇಶದಲ್ಲಿ ಎಷ್ಟು ಜಲಮೂಲಗಳಿವೆ, ಅಂತರ್ಜಲ ಮತ್ತು ಮೇಲ್ಮೈ ಜಲ ಯೋಜನೆಗಳ ಸ್ಥಿತಿಗತಿ ಏನು ಎಂಬ ನಿಖರ ಮಾಹಿತಿ ಲಭ್ಯವಾದರೆ, ಮುಂದಿನ ನೀರಾವರಿ ಮತ್ತು ಜಲಸಂರಕ್ಷಣಾ ಯೋಜನೆಗಳನ್ನು ಹೆಚ್ಚು ವೈಜ್ಞಾನಿಕವಾಗಿ ಹಾಗೂ ಅಗತ್ಯಕ್ಕೆ ಅನುಗುಣವಾಗಿ ರೂಪಿಸಲು ಸಾಧ್ಯವಾಗುತ್ತದೆ' ಎಂದಿದ್ದಾರೆ. 'ಈ ಅಂಕಿ-ಅಂಶಗಳು ಕೇವಲ ಗಣತಿ ವರದಿಗೆ ಸೀಮಿತವಾಗಬಾರದು. ಬರಪೀಡಿತ ಪ್ರದೇಶಗಳಲ್ಲಿ ಜಲಭದ್ರತೆ ಕಲ್ಪಿಸುವುದು, ಕೆರೆಗಳ ಪುನಶ್ಚೇತನ, ಅಂತರ್ಜಲ ಮರುಪೂರಣ, ಚೆಕ್ ಡ್ಯಾಂಗಳ ನಿರ್ಮಾಣ ಹಾಗೂ ಕೆರೆ ತುಂಬಿಸುವ ಯೋಜನೆಗಳಿಗೆ ಆದ್ಯತೆ ನಿಗದಿಪಡಿಸಲು ಈ ದತ್ತಾಂಶವನ್ನು ಪರಿಣಾಮಕಾರಿಯಾಗಿ ಬಳಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ದತ್ತಾಂಶ ಆಧಾರಿತ ಯೋಜನೆ ಹಾಗೂ ತಂತ್ರಜ್ಞಾನದ ಬಳಕೆ-ಯ ಮೂಲಕ ರಾಜ್ಯದ ಜಲಸಂಪನ್ಮೂಲಗಳ ಸಮರ್ಥ ನಿರ್ವಹಣೆಗೆ ಕ್ರಮ ಕೈಗೊಳ್ಳಲಾಗುವುದು' ಎಂದು ತಿಳಿಸಿದ್ದಾರೆ.

# ಸಿದ್ದರಾಮಯ್ಯ ನಿವೃತ್ತಿ ಪ್ರಶ್ನೆಯೇ ಇಲ್ಲ: ಕೆ.ಎಂ. ಶಿವಲಿಂಗೇಗೌಡ

ಅರಸೀಕೆರೆ : ಸಿದ್ದರಾಮಯ್ಯ ರಾಜಕೀಯ ನಿವೃತ್ತಿ ಪ್ರಶ್ನೆಯೇ ಇಲ್ಲ. ಮುಖಂಡರು ಹಾಗೂ ಕಾರ್ಯಕರ್ತರ ಒತ್ತಾಯದ ಮೇರೆಗೆ ಅವರು ಚುನಾವಣಾ ರಾಜಕಾರಣದಲ್ಲಿ ಮುಂದುವರಿಯಲಿ ದ್ದಾರೆ. ಮುಂದಿನ 5–10 ವರ್ಷಗಳ ಕಾಲ ಸಕ್ರಿಯ ರಾಜಕಾರಣದಲ್ಲಿ ಇರಬೇಕು ಎಂಬುದು ಎಲ್ಲರ ಆಶಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದೆ ಚುನಾವಣೆಗೆ ಸ್ಪರ್ಧಿಸಬೇಕೋ ಬೇಡವೋ ಎಂಬ ಬಗ್ಗೆ ಯೋಚನೆ ಮಾಡುತ್ತಿದ್ದೇನೆ ಎಂದಿರುವ ಸಿದ್ದರಾಮಯ್ಯ ಹೇಳಿಕೆಯನ್ನು ರಾಜಕೀಯ ನಿವೃತ್ತಿ ಎಂದು ವ್ಯಾಖ್ಯಾನಿ ಸುವುದು ಸರಿಯಲ್ಲ ಎಂದರು. ಸಿದ್ದರಾಮಯ್ಯ ಅವರು ಕೇಂದ್ರ ರಾಜಕಾರಣಕ್ಕೆ ತೆರಳಿ ಲೋಕಸಭೆ ಅಥವಾ ರಾಜ್ಯಸಭೆಯಲ್ಲಿ ತಮ್ಮ ಅನುಭವ ಹಾಗೂ ಮಾರ್ಗದರ್ಶನ ನೀಡಬೇಕು ಎಂಬುದು ನನ್ನ ವೈಯಕ್ತಿಕ ಆಶಯ.

ಸರ್ಕಾರಕ್ಕೆ ಅವರ ಸಲಹೆ, ಮಾರ್ಗದರ್ಶನದ ಅಗತ್ಯವಿದೆ ಎಂದು ತಿಳಿಸಿದರು.

ಸಿದ್ದರಾಮಯ್ಯ ಅವರೊಂದಿಗೆ ಗುರುತಿಸಿಕೊಂಡಿರುವ ಹಲವು ನಾಯಕರು ಕಾಂಗ್ರೆಸ್ ತೊರೆದು ಬೇರೆ ಪಕ್ಷಗಳಿಗೆ ಸೇರ್ಪಡೆಯಾಗಲಿದ್ದಾರೆ ಎಂಬುದು ಕೇವಲ ಊಹಾಪೋಹ. ಯಾರೂ ಪಕ್ಷ ತೊರೆಯುವುದಿಲ್ಲ. ಪಕ್ಷದಲ್ಲಿ ಭಿನ್ನಾಭಿಪ್ರಾಯಗಳು ಸಹಜ ವಾಗಿದ್ದು, ಮಾತುಕತೆ ಮೂಲಕ ಬಗೆಹರಿಸಿಕೊಂಡು ಮುಂದುವರಿ ಯುತ್ತೇವೆ ಎಂದರು.

ಮುಂದಿನ ಲೋಕಸಭಾ ಚುನಾವಣೆ ವೇಳೆಗೆ ಕಾಂಗ್ರೆಸ್ ಮತ್ತಷ್ಟು ಬಲಗೊಳ್ಳಲಿದ್ದು, 2029ರಲ್ಲಿ ರಾಹುಲ್ ಗಾಂಧಿ ದೇಶದ ಪ್ರಧಾನಿಯಾಗಲಿದ್ದಾರೆ ಎಂದರು.

# ನೂತನ ಐಜಿಪಿ ಎನ್.ಸತೀಶ್ ಕುಮಾರ್ ಅಧಿಕಾರ ಸ್ವೀಕಾರ

ಸೈಬರ್ ವಂಚನೆಗೆ ಕಡಿವಾಣ: ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧ, ಆನ್‌ಲೈನ್ ವಂಚನೆ, ಎಂಎಲ್‌ಎಂ ಹಾಗೂ ಡಿಪಾಸಿಟ್ ವಂಚನೆಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ. ಹೊಸ ಮಾದರಿಯ ವಂಚನೆಗಳು ಕಂಡುಬಂದ ಕೂಡಲೇ ಅವುಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ, ಮುನ್ನೆಚ್ಚರಿಕೆ ಕ್ರಮಗಳನ್ನುಕೈಗೆ ೞಳ್ಳಲಾಗುವುದು ಎಂದು ಹೇಳಿದರು.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅನಧಿಕೃತ ಪಾರ್ಕಿಂಗ್, ಸಂಚಾರ ನಿಯಮ ಉಲ್ಲಂಘನೆ ಹಾಗೂ ಅಜಾಗರೂಕ ಚಾಲನೆಗೆ ಕಡಿವಾಣ ಹಾಕಲಾಗುವುದು. ಹೆದ್ದಾರಿಗಳಲ್ಲಿ ಲೇನ್ ಶಿಸ್ತು ಪಾಲನೆಗೆ ವಿಶೇಷ ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಎಸ್ಪಿ ಪರಮೇಶ್ವರ ಹೆಗಡೆ, ಇಲಾಖೆಯ ಹಿರಿಯ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ನೆಮ್ಮದಿ ಎಲ್ಲೂ ಹುಡುಕಬೇಡಿ ಅದು ನಮ್ಮೊಳಗಿದೆ : ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮೀಜಿ



ಬಳ್ಳಾರಿ : ಸಿರಿವಂತಿಕೆ ಮನುಷ್ಯನ ನೆಮ್ಮದಿಯನ್ನು ಕೆಡಿಸುತ್ತದೆ . ಇಂದಿನ ದಿನಗಳಲ್ಲಿ ಸಮಾಧಾನ–ನೆಮ್ಮದಿ ಇಲ್ಲದೆ ನಿದ್ರೆ ಗುಳಿಗೆಗಳನ್ನು ತೆಗೆದುಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ. ನಿಜವಾದ ಶಾಂತಿ, ನೆಮ್ಮದಿ ಎಂಬುದು ಮನುಷ್ಯನ ಹೊರಗಿಲ್ಲ, ಅದು ನಮ್ಮೊಳಗೇ ಇದೆ" ಎಂದು ಶ್ರೀಮದ್ ಗಿರಿರಾಜ ಸೂರ್ಯಸಿಂಹಾಸನಾಧೀಶ್ವರ ಶ್ರೀ ಶ್ರೀ ಶ್ರೀ 1008 ಶ್ರೀ ಜಗದ್ಗುರು ಡಾ॥ ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮೀಜಿ ಹೇಳಿದರು.ಅವರು ನಗರದ ಗುಗ್ಗರಹಟ್ಟಿಯ ಶ್ರೀಶೈಲ ಭ್ರಮರಾಂಭ ಮಲ್ಲಿಕಾರ್ಜುನ ಸೇವಾ ಟ್ರಸ್ಟ್ ಹಾಗೂ ಶಿವದೀಕ್ಷಾ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಪಾದಪೂಜೆ, ಧರ್ಮೋಪದೇಶ ಹಾಗೂ ತುಲಾಭಾರ ಕಾರ್ಯಕ್ರಮದ ನಿಮಿತ್ತ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿ ಭಗವಂತನನ್ನು ತಲುಪಲು ಭಕ್ತಿ, ಜ್ಞಾನ ಮತ್ತು ವೈರಾಗ್ಯ ಎಂಬ ಮೂರು ಮಾರ್ಗಗಳಿವೆ.ಭಗವಂತನನ್ನು ನೋಡಲು ಭೌತಿಕ ಕಣ್ಣುಗಳ ಅಗತ್ಯವಿಲ್ಲ, ಕಣ್ಣಿನಿಂದ ಆಚೆಗೆ ಭಕ್ತಿಯಿಂದ ನೋಡಬೇಕಾಗಿದೆ. ಮನುಷ್ಯನಲ್ಲಿ ಉತ್ಕಟವಾದ ಪ್ರೀತಿ ಇದ್ದಾಗ ಮಾತ್ರ ಅಲ್ಲಿ ನಿಜವಾದ ಭಕ್ತಿ ನೆಲೆಸುತ್ತದೆ" ಎಂದರು."ವಯಸ್ಸಿನ ಅನುಗುಣವಾಗಿ ಪ್ರೀತಿಯ ಸ್ವರೂಪ ಬದಲಾಗುತ್ತದೆ. ಕಾಲಕ್ರಮೇಣ ಪ್ರೀತಿ ವ್ಯತ್ಯಾಸವಾಗುತ್ತಾ ಸಾಗುತ್ತದೆ. ಮನುಷ್ಯ ತನ್ನ ಜೀವನದಲ್ಲಿ ಮೊದಲ ಸ್ಥಾನದ ಪ್ರೀತಿಯನ್ನು ತನಗೆ ತಾನೇ ನೀಡಿಕೊಳ್ಳುತ್ತಾನೆ. ತಂದೆ, ತಾಯಿ, ಹೆಂಡತಿ ಮತ್ತು ಮಕ್ಕಳು ಎರಡನೇ ಸ್ಥಾನದಲ್ಲಿ ಬರುತ್ತಾರೆ. ಪ್ರಪಂಚದಲ್ಲಿ ಸಂಬಂಧಗಳು, ವೈರಿಗಳು ಅಥವಾ ದೇಶ–ವಿದೇಶಗಳ ಪರಿಸ್ಥಿತಿ ಏನೇ ಇರಲಿ, ಸ್ವ–ಪ್ರೀತಿ ಬದಲಾಗುವುದಿಲ್ಲ. ಅದೇ ರೀತಿ ತಂದೆ–ತಾಯಂದಿರು ನೀಡುವ ನಡವಳಿಕೆಯಿಂದಷ್ಟೇ ಮಕ್ಕಳಿಗೆ ಉತ್ತಮ ಸಂಸ್ಕಾರ ಸಿಗಲು ಸಾಧ್ಯ" ಎಂದು ಅವರು ಪ್ರತಿಪಾದಿಸಿದರು."ಸಮಾಜದಲ್ಲಿ ಅಪರೂಪದ ಭಕ್ತಿ ಮಾರ್ಗವನ್ನು ಅಳವಡಿಸಿಕೊಂಡವರಲ್ಲಿ ಕೆ. ರಾಜಶೇಖರಗೌಡರು ಒಬ್ಬರು. ಅವರು ತಮ್ಮ ಸ್ವ–ಂತ ಮನೆ ನಿರ್ಮಿಸುವ ಮುನ್ನ ದೇವಾಲಯ ಮತ್ತು ಗೋಶಾಲೆಯನ್ನು ನಿರ್ಮಿಸಿ ಧರ್ಮ ಕಾಯಕದಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವುದು ಶ್ಲಾಘನೀಯ" ಎಂದು ಶ್ರೀಗಳು ಹಾರೈಸಿದರು.ಕಾರ್ಯಕ್ರಮದಲ್ಲಿ ಪುರಾಣ ಪ್ರವಚನಕಾರ ಮಹದೇವಸ್ವಾಮಿ ಮಾತನಾಡಿದರು.ಭವ್ಯ ಮೆರವಣಿಗೆ: ಕಾರ್ಯಕ್ರಮದ ಅಂಗವಾಗಿ ವೀರಭದ್ರ ವೀರಗಾಸೆ ಹಾಗೂ ನಂದಿಕೋಲು ಕುಣಿತಗಳೊಂದಿಗೆ ಧಾರ್ಮಿಕ ವೈಭವದಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.ಈ ಸಂದರ್ಭದಲ್ಲಿ ಶ್ರೀಶೈಲ ಭ್ರಮರಾಂಭ ಮಲ್ಲಿಕಾರ್ಜುನ ಸೇವಾ ಟ್ರಸ್ಟ್ ಹಾಗೂ ಶಿವದೀಕ್ಷಾ ಮಂದಿರದ ಧರ್ಮಾಧಿಕಾರಿ ಕೆ. ರಾಜಶೇಖರಗೌಡ ದಂಪತಿಗಳು, ನಾಗಲಿಂಗಸ್ವಾಮಿ ಹಾಗೂ ನೂರಾರು ಸಂಖ್ಯೆಯ ಸದ್ಭಕ್ತರು ಉಪಸ್ಥಿತರಿದ್ದರು.

# ಅಶೋಕ್, ವಿಜಯೇಂದ್ರರನ್ನು ಸರಿಸಿ ಅಧಿಕಾರಕ್ಕೆ ಬರೋ ಆಸೆ ಕುಮಾರಸ್ವಾಮಿದು: ಡಿಕೆಶಿ ವ್ಯಂಗ್ಯ




ಬೆಂಗಳೂರು: ಚುನಾವಣೆ ಹತ್ತಿರ ಬರಲಿ ಅಶೋಕ್ ಹಾಗು ವಿಜಯೇಂದ್ರ ಅವರಿಗೆ ಯಾವ ಅಧಿಕಾರವೂ ಇರೋದಿಲ್ಲ. ಬೇರೆಯವರು ಪ್ಯಾರಾಚೂಟ್ ಮೂಲಕ ಇಳಿಯುತ್ತಾರೆ ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ವ್ಯಂಗ್ಯವಾಡಿದ್ದಾರೆ.

ಅಶೋಕ್, ವಿಜಯೇಂದ್ರ ಅವರ ಕತೆ ಏನಿದ್ದರೂ, ಬರೀ ಬುಟ್ಟಿ ಬೇವಿನ ಸೊಪ್ಪು, ನಂದೇ ಬೆಳಗು ಪೂಜಾರಿ ಅನ್ನೋ ತರಹ. ಕುಮಾರಸ್ವಾಮಿ ಇವರಿಬ್ಬರನ್ನು ಇಳಿಸಿ ನನಗೇನಾದರೂ ಸಿಗಬಹುದಾ ಅಂತಾ ನೋಡುತ್ತಿದ್ದಾರೆ. ಹೀಗಾಗಿ ದಿನಕ್ಕೊಂದು ಹೇಳಿಕೆ ನೀಡುತ್ತಿದ್ದಾರೆ. ಬಾಂಬ್ ಹಾಕುತ್ತೇನೆ ಎನ್ನುತ್ತಿದ್ದಾರೆ ಎಂದೂ ಸಿಎಂ ಅವರು ಛೇಡಿಸಿದರು.

ಕೆಪಿಸಿಸಿ ಕಚೇರಿಯಲ್ಲಿ ಭಾನುವಾರ ಬಿಜೆಪಿ ಮಾಜಿ ಶಾಸಕ ನೆ.ಲ. ನರೇಂದ್ರಬಾಬು ಅವರ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕುಮಾರಸ್ವಾಮಿ ಅವರಿಗೆ ಕೇಂದ್ರದಲ್ಲಿ ದೊಡ್ಡ ಮಂತ್ರಿ ಸ್ಥಾನ ಸಿಕ್ಕಿದೆ. ಅದರ ಮೂಲಕ ಕರ್ನಾಟಕದ 50 ಸಾವಿರ ಜನರಿಗೆ ಉದ್ಯೋಗ ಸಿಗುವಂತೆ ಮಾಡಲಿ. ಅವರಿಗೆ ಎಲ್ಲಿ ಬೇಕೋ ಅಲ್ಲಿ, ಮಂಡ್ಯದಲ್ಲೇ ಬೇಕಾದರೂ ಭೂಸ್ವಾಧೀನ ಮಾಡಿ ಕೊಡೋಣ. ಆದರೆ ಅವರು ನನ್ನನ್ನು ಅಧಿಕಾರದಿಂದ ಇಳಿಸಿ ಬಿಡ್ತೇನೆ, ದೆಹಲಿಯಿಂದ ಬಾಂಬ್ ಹಾಕಿ ಬಿಡ್ತೇನೆ, ಅಲ್ಲೋಲ ಕಲ್ಲೋಲ ಮಾಡಿ ಬಿಡ್ತೇನೆ ಅಂತ ಮಾತಾಡುತ್ತಿದ್ದಾರೆ ಎಂದು ತಿರುಗೇಟು ನೀಡಿದರು.

"ಅದೇನೋ ಅಲ್ಲೋಲ ಕಲ್ಲೋಲ ಆಗಿದೆಯಲ್ಲ. ಅದನ್ನು ನಾನು ಬಿಡಿಸಿ ಹೇಳಬೇಕೆ? ದಿನವೂ ನಾವು ಟಿವಿಯಲ್ಲಿ ನೋಡುತ್ತಿದ್ದೇವಲ್ಲ"ಎಂದಾಗ ಸಭಿಕರೊಬ್ಬರು 'ಪೆನ್ ಡ್ರೈವ್' ಎಂದು ಕೂಗಿದರು.

ಆಗ ಸಿಎಂ ಅವರು, "ನಮಗೆ ಪೆನ್ ಡ್ರೈವ್ ವಿಚಾರ ಬೇಡ, ಅವರುಗಳು ಏನು ಬೇಕಾದರೂ ಮಾಡಿಕೊಳ್ಳಲಿ. ಸೆಂಟ್ರಲ್ ಜೈಲ್ ವಿಚಾರವೆಲ್ಲ ಅವರವರದ್ದು. ಅದೆಲ್ಲವೂ ಅವರ ಸಿದ್ಧಾಂತ. ಅವರಿಂದ ಯಾರ್ಯಾರ ಕುಟುಂಬ ಏನಾಯಿತು ಎಂದು ಈಗ ಮಾತನಾಡುವುದು ಬೇಡ" ಎಂದೂ ಮಾತಿನ ಬಾಣ ಬಿಟ್ಟರು.

"ನಮ್ಮನ್ನು ಏನು ಬೇಕಾದರೂ ಮಾಡಲಿ. ನಮ್ಮನ್ನು ಬೇಕಾದರೆ ಸೀಳಿ ಇಡಿ, ಸಿಬಿಐಗೆ ತೆಗೆದುಕೊಂಡು ಹೋಗಲಿ, ಯಾವ ತನಿಖೆ ಬೇಕಾದರೂ ಮಾಡಲಿ. ಆದರೆ ಅವರ ವಿರುದ್ಧ ತನಿಖೆ ಮಾಡಿದಾಗ ನ್ಯಾಯಾಲಯಕ್ಕೆ ಹೋಗಿ ಏಕೆ ತಡೆಯಾಜ್ಞೆ ತರಲಾಗುತ್ತಿದೆ. ನೀವೆಲ್ಲವೂ ಟೀಮ್ ಅಲ್ಲವೇ? ಈ ಸ್ಥಾನದಲ್ಲಿದ್ದುಕೊಂಡು ದ್ವೇಷ ಬೇಡ ಎಂದು ಆ ವಿಚಾರಗಳಿಗೆ ನಾನು ಹೋಗಿಲ್ಲ. ಯಾರಿಗೂ ತೊಂದರೆ ಆಗಬಾರದು ಎಂಬುದು ನನ್ನ ಆಶಯ. ಈ ಅಧಿಕಾರ ಸಕಾರಾತ್ಮಕವಾಗಿ ಉಪಯೋಗವಾಗಬೇಕು. ಈ ಅಧಿಕಾರ ಇರುವುದು ದುರುಪಯೋಗ ಮಾಡಲು ಅಲ್ಲ. ಹತ್ತು ಜನಕ್ಕೆ ಒಳ್ಳೆಯದನ್ನು ಮಾಡಲು ಎಂಬುದು ನನ್ನ ಬದ್ಧತೆ" ಎಂದರು. "10 ದಿನ ಸದನ ನಡೆಸಲೂ ಬಿಡಲಿಲ್ಲ. ಆನಂತರವೂ ಪಾದಯಾತ್ರೆ ಮಾಡಿದರು. ಈಗ ಕರೆದಿರುವ ಅಧಿವೇಶನದಲ್ಲಿ ಬೇರೆ ವಿಚಾರ ಮಾತನಾಡುವಂತಿಲ್ಲ. ಕೇವಲ ರೈತರ ವಿಚಾರ ಮಾತ್ರ. ಕಸ್ತೂರಿ ರಂಗನ್ ವರದಿ ಜಾರಿಗೆ ತಂದವರು ಯಾರು? ಇದರ ಬಗ್ಗೆ ಚರ್ಚೆ ಮಾಡಲಿ, ಬಿಡಲಿ. ಅದು ಅವರಿಗೆ ಬಿಟ್ಟಿದ್ದು. ಆನಂತರ ಅವರು ಗದೆ-ಯಾದರೂ ಬೀಸಲಿ, ಬಾಣವನ್ನಾದರೂ ಬಿಡಲಿ. ಇದನ್ನು ಅನುಭವಿಸಲು ನಮ್ಮ ಪಕ್ಷ, ನಾವು ಹಾಗೂ ಕಾರ್ಯಕರ್ತರು ಸಿದ್ಧರಿದ್ದೇವೆ" ಎಂದರು.

# ಸಾರಿಗೆ ಇಲಾಖೆಗೆ 7 ಸಾವಿರ ಕೋಟಿ ರೂ. ಅನುದಾನ ಮಂಜೂರು: ಬೈರತಿ ಸುರೇಶ್



ಮಂಡ್ಯ: ರಾಜ್ಯ ಸರ್ಕಾರದಿಂದ ಸಾರಿಗೆ ಇಲಾಖೆಗೆ 7 ಸಾವಿರ ಕೋಟಿ ರೂಪಾಯಿಗಳ ಅನುದಾನವನ್ನು ಮಂಜೂರು ಮಾಡಲಾಗಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಸಮಾಜ ಸೇವಕ ಮತ್ತು ಕಾಂಗ್ರೆಸ್ ಮುಖಂಡರಾದ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ನೇತೃತ್ವದಲ್ಲಿ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಬೆಳ್ಳೂರು ಹೋಬಳಿಯ ಕನ್ನಾಘಟ್ಟ ಗ್ರಾಮದಲ್ಲಿ ಮಹಾಗಣಪತಿ ಪ್ರತಿಷ್ಠಾಪನಾ ಮಹೋತ್ಸವ ಮತ್ತು ನೂತನ ದೇವಾಲಯದ ಲೋಕಾರ್ಪಣ ಮಹೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಸಾರಿಗೆ ಇಲಾಖೆಯ ಅಭಿವೃದ್ಧಿಗೆ ಹೆಚ್ಚಿನ ಆಸಕ್ತಿ ತೋರಿದ್ದಾರೆ. ಈ ಹಿನ್ನೆಲೆಯಲ್ಲಿ ನಮ್ಮ ಇಲಾಖೆಗೆ ಒಟ್ಟು 7 ಸಾವಿರ ಕೋಟಿ ರೂಪಾಯಿ ಅನುದಾನವನ್ನು ನೀಡಲು ಮುಖ್ಯಮಂತ್ರಿಗಳು ಅನುಮೋದನೆ ನೀಡಿದ್ದಾರೆ. ಇದಿಷ್ಟೇ ಅಲ್ಲದೇ, 1 ಸಾವಿರ ಬಸ್ ಗಳನ್ನು ಖರೀದಿ ಮಾಡಲು ಹಸಿರು ನಿಶಾನೆ ತೋರಿದ್ದು, ರಾಜ್ಯದ ಬಸ್ ನಿಲ್ದಾಣಗಳ ಉನ್ನತೀಕರಣಕ್ಕೆ ಕೇಂದ್ರ ಸರ್ಕಾರದಿಂದ 2 ಸಾವಿರ ಕೋಟಿ ರೂಪಾಯಿ ಪಡೆಯಲೂ ಸಮ್ಮತಿ ಸೂಚಿಸಿರುವುದು ಸಂತಸದ ವಿಚಾರವಾಗಿದೆ ಎಂದು ತಿಳಿಸಿದರು.

ಸಿದ್ದರಾಮಯ್ಯ ಅವರು 2023ರಲ್ಲಿ ಮುಖ್ಯಮಂತ್ರಿಯಾಗಿ ಅಧಿಕಾರಕ್ಕೆ ಬಂದ ತಕ್ಷಣ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವಲ್ಲಿ ಯಶಸ್ವಿಯಾದರು ಮತ್ತು ಅದರ ಶ್ರೇಯಸ್ಸು ನಮ್ಮ ಸರ್ಕಾರಕ್ಕೆ ಸಲ್ಲುತ್ತದೆ. ಈಗಿನ ಮುಖ್ಯಮಂತ್ರಿ ಶಿವಕುಮಾರ್ ಅವರು ಯೋಜನೆಗಳನ್ನು ಮುಂದುವರಿಸಿದ್ದು, ವಿದ್ಯಾರ್ಥಿಗಳಿಗೆ ಉಚಿತವಾಗಿ ಬಸ್ ಪಾಸ್ ನೀಡುವ ಮತ್ತೊಂದು ಯೋಜನೆಯನ್ನು ಪ್ರಕಟಿಸಿ ಜನಮಾನಸದಲ್ಲಿ ಉಳಿಯುವಂತಹ ಕೆಲಸ ಮಾಡುತ್ತಿದ್ದಾರೆ ಎಂದು ಬಣ್ಣಿಸಿದರು.

ರಾಜ್ಯದಲ್ಲಿ ಸುಮಾರು 50 ಲಕ್ಷ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡಲಾಗುತ್ತಿದೆ. ಇದಕ್ಕಾಗಿ ಸಾರಿಗೆ ಸಂಸ್ಥೆಗಳಿಗೆ ವಾರ್ಷಿಕ ಸುಮಾರು 350 ಕೋಟಿ ರೂ. ವೆಚ್ಚವಾಗುತ್ತದೆ. ಇದು ಸಾರಿಗೆ ಸಂಸ್ಥೆಗಳಿಗೆ ಹೊರೆಯಾಗುತ್ತದೆ ಎಂಬುದನ್ನು ಮನಗಂಡಿರುವ ಮುಖ್ಯಮಂತ್ರಿಗಳು ಈ ಹಣವನ್ನು ಸರ್ಕಾರ ನೀಡಲಿದೆ ಎಂದು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಉಚಿತ ಬಸ್ ಪ್ರಯಾಣದ ಶಕ್ತಿ, 10 ಕೆಜಿ ಉಚಿತ ಅಕ್ಕಿ, 2 ಸಾವಿರ ರೂಪಾಯಿ ಪ್ರೋತ್ಸಾಹಧನ ಮತ್ತು ನಿರುದ್ಯೋಗಿಗಳಿಗೆ 3 ಸಾವಿರ ರೂಪಾಯಿಗಳನ್ನು ನೀಡುತ್ತಿದ್ದೇವೆ. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ವಾರ್ಷಿಕ 76 ಸಾವಿರ ಕೋಟಿ ರೂಪಾಯಿಗಳನ್ನು ನೀಡುತ್ತಿದೆ. ಹೀಗೆ ಕಳೆದ 3 ವರ್ಷದಿಂದ 1.68 ಲಕ್ಷ ಕೋಟಿ ರೂಪಾಯಿಗಳನ್ನು ನಮ್ಮ ರಾಜ್ಯದ ಜನರಿಗೆ ಉಚಿತವಾಗಿ ನೀಡಿದೆ ಎಂದರು.

ಮಂಡ್ಯ ಜಿಲ್ಲೆಗೆ ಹೊಸದಾಗಿ 40 ಬಸ್‌ಗಳನ್ನು ಮಂಜೂರು ಮಾಡುವಂತೆ ಗ್ಯಾರಂಟಿ ಸಮಿತಿ ಉಪಾಧ್ಯಕ್ಷರಾದ ದಿನೇಶ್ ಗೂಳಿಗೌಡ ಅವರು ಮನವಿ ಸಲ್ಲಿಸಿದ್ದಾರೆ. ಆದರೆ, ನಮ್ಮ ಕಾಂಗ್ರೆಸ್ ಸರ್ಕಾರ ಈ ಜಿಲ್ಲೆಗೆ 100 ಬಸ್ ಗಳನ್ನು ನೀಡಲಿದೆ. ಮುಂದಿನ 15–20 ದಿನಗಳೊಳಗಾಗಿ ಈ ಬಸ್‌ಗಳ ಸಂಚಾರವನ್ನು ಆರಂಭಿಸಲಾಗುವುದು ಎಂದು ಭರವಸೆ ನೀಡಿದರು.

2028ಕ್ಕೂ ನಮ್ಮ ಕಾಂಗ್ರೆಸ್ ಪಕ್ಷವೇ ಅಧಿಕಾರಕ್ಕೆ ಬರುತ್ತದೆ. ಯಾವ ಪಕ್ಷ ಅಧಿಕಾರಕ್ಕೆ ಬರುತ್ತದೆ ಎಂಬುದನ್ನು 2033ಕ್ಕೆ ನೋಡೋಣ. 2028ಕ್ಕಂತೂ ನಮ್ಮದೇ ಸರ್ಕಾರ ಬರಲಿದೆ. ಆಗ ಇನ್ನಷ್ಟು ಸೌಲಭ್ಯಗಳನ್ನು ಒದಗಿಸಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದರು.

ಆದಿ ಚುಂಚನಗಿರಿ ಪುಣ್ಯಕ್ಷೇತ್ರವು ಕೇವಲ ಒಕ್ಕಲಿಗ ಸಮುದಾಯದ ಹಿತವನ್ನಷ್ಟೇ ಕಾಯುತ್ತಿಲ್ಲ. ಪ್ರತಿಯೊಂದು ಸಮುದಾಯದವರನ್ನೂ ಒಂದೇ ರೀತಿಯಲ್ಲಿ ಪರಿಗಣಿಸುತ್ತಿದೆ. ಇದರ ಪರಿಣಾಮವಾಗಿ ಪ್ರತಿ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳು ಶ್ರೀಮಠದಲ್ಲಿ ವಿದ್ಯಾರ್ಜನೆ ಮಾಡುತ್ತಿದ್ದಾರೆ. ಈ ಮೂಲಕ ಶ್ರೀಮಠವು ಕುವೆಂಪುರವರು ಸಾರಿದ ಸಮಪಾಲು, ಸಮಬಾಳು, ಸರ್ವಜನಾಂಗದ ಶಾಂತಿಯ ತೋಟ ಎಂಬ ಸಂದೇಶವನ್ನು ಮಠದಲ್ಲಿ ಚಾಚೂ ತಪ್ಪದೇ ಪಾಲಿಸುತ್ತಿದೆ ಎಂದು ಬೈರತಿ ಸುರೇಶ್ ಮೆಚ್ಚುಗೆ ಸೂಚಿಸಿದರು.

ಸ್ಟಾರ್ ಚಂದ್ರು ಮತ್ತು ಪುಟ್ಟಸ್ವಾಮಿಗೌಡರು ತಮ್ಮ ಊರಷ್ಟೇ ಅಲ್ಲದೇ ಸುತ್ತಮುತ್ತಲಿನ ಪ್ರದೇಶಗಳ ಅಭಿವೃದ್ಧಿಗೆ ಪೂರಕವಾಗಿ ಸಾಕಷ್ಟು ಸಮಾಜಸೇವೆಯನ್ನು ಮಾಡುತ್ತಾ ಬಂದಿದ್ದಾರೆ. ಜೀವನದಲ್ಲಿ ಇಂತಹ ಪುಣ್ಯವಾದ ಕೆಲಸಗಳನ್ನು ಮಾಡುವ ಅವಕಾಶಗಳು ಕಡಿಮೆ. ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕಾದ್ದು ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.